# ಹಂಪಿ ಟೈಮ್ಸ್

HAMPI TIMES
KANNADA DAILY
ಕನ್ನಡ ದಿನಪತ್ರಿಕೆ

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA

epaper.hampitimes.com | e-mail: hampitimes@gmail.com | M:94486 33038 Reg.No.PMG/KA/NK/BLY/01/2024-2026

ಸಂಪುಟ:02 • ಸಂಚಿಕೆ: 263 • ಪಿ.ಆರ್.ಜಿ.ಐ.ನಂ.:KARKAN/2023/88055 • ವಿಜಯನಗರ • 25.04.2025 • ಶುಕ್ರವಾರ • ಪುಟ:04 • ಬೆಲೆ:2
Volume:02 • Issue: 263 • PRGI No:KARKAN/2023/88055 • VIJAYANAGARA • 25.04.2025 • Friday • Page:04 • Rs:2







## ನಿನಗೆ ನೀನೇ ಬೆಳಕು

ಪುಸ್ತಕಗಳು ಮೌನ ಗುರುಗಳು
ಓದುವವನೇ ಶಿಷ್ಯ

## ದೇವಾಲಯ ದರ್ಶನ



ಹಂಪಿ ಶ್ರೀ ವಿರೂಪಾಕ್ಷೇಶ್ವರ ದರ್ಶನ

ನಿತ್ಯ ಅಭಿಷೇಕ ಸಮಯ
ಬೆಳಿಗ್ಗೆ: 6:30, 10:30 ಸಂಜೆ 6:30ಕ್ಕೆ

–: ದರ್ಶನ ಸಮಯ :–
ಬೆಳಿಗ್ಗೆ 6.30 ರಿಂದ ಮಧ್ಯಾಹ್ನ 1.15ರವರೆಗೆ
ಮಧ್ಯಾಹ್ನ 3 ರಿಂದ ರಾತ್ರಿ 7.30ರವರೆಗೆ

## ಆನಂದ ಬಾಣ

ಮನುಷ್ಯ ಎಂಬ ಸ್ವಾರ್ಥ
ಜೀವಿಯಿಂದ ಭೂಮಿಯನ್ನ
ಕಾಪಾಡಿ



# ವಿನಯವಂತಿಕೆಗೆ ಮಾದರಿ ವರನಟ ಡಾ.ರಾಜ್‌ಕುಮಾರ್

## ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣಪ್ಪ ಹೇಳಿಕೆ | ಡಾ.ರಾಜ್ ಜನ್ಮದಿನಾಚರಣೆ



■ **ಹಂಪಿ ಟೈಮ್ಸ್ ಹೊಸಪೇಟೆ**

ನಾಡಿನ ನೆಲ, ಜಲ, ಕನ್ನಡ ಭಾಷೆ ಪರ ಮುಂಚೂಣಿ ವಹಿಸಿದ್ದ ಕನ್ನಡದ ಕಟ್ಟಾಳು ಡಾ.ರಾಜಕುಮಾರ ಜೀವನ ಶೈಲಿಯೇ ಆದರ್ಶಪ್ರಾಯವಾದದು ಎಂದು ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣಪ್ಪ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಏರ್ಪಡಿಸಿದ್ದ ವರನಟ ಡಾ.ರಾಜಕುಮಾರ್‌ರವರ 97ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಡಾ.ರಾಜ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗುರುವಾರ ಅವರು ಮಾತನಾಡಿದರು, ವಿನಯವಂತಿಕೆಗೆ ರಾಜಕುಮಾರ್ ಮಾದರಿ ವ್ಯಕ್ತಿ, ವ್ಯಕ್ತಿತ್ವವಾಗಿದ್ದರು. ರಾಜ್ಯದ ಪ್ರಭಾವಿ ನಟನಾದರು ಚಿತ್ರರಂಗದ ಕಲಾವಿದರೊಂದಿಗೆ ಸಮಾನವಾಗಿ ಬೆರೆಯುತ್ತಿದ್ದದು ಸ್ಮರ ಣೀಯ. ಕರ್ನಾಟಕ ಕಲಾವಿದರ ಸಂಘ ಸ್ಥಾಪಿಸಿ ಕಲಾವಿದರ ಶ್ರೇಯೋಭಿವೃದ್ಧಿ ಬಯಸಿದ್ದರು. ಅಭಿಮಾನಿಗಳನ್ನು ದೇವರು ಎಂದು ಸರಳತೆ ಮೆರೆದ ಚಿತ್ರರಂಗದ ಧೃವತಾರೆಯಾಗಿದ್ದರು. ಅವರ ಎಲ್ಲಾ ಸಿನಿಮಾಗಳು ಸಾಮಾಜಿಕ ಪರಿವರ್ತನೆಗೆ ಪೂರಕವಾದ ಚಿತ್ರಗಳಾಗಿವೆ. ಅವರ ಜೀವನ ಶೈಲಿ, ಸರಳತೆ, ವಿನಯವಂತಿಕೆ ಇಂದಿನ ಯುವಕರು ಅಳವಡಿಸಿಕೊಳ್ಳಬೇಕಿದೆ. ರಾಜ್ಯಕ್ಕೆ, ರಾಷ್ಟ್ರಕ್ಕೆ ಉನ್ನತ ಕೀರ್ತಿ ನೀಡಿದ ಶ್ರೇಯಸ್ಸು ಡಾ.ರಾಜಕುಮಾರ್ ಸಲ್ಲಬೇಕಿದೆ. ಅಂತರಾಷ್ಟ್ರೀಯ ಮಟ್ಟದಲ್ಲಿ ಡಾ.ರಾಜಕುಮಾರ್ ಒಬ್ಬ ಶ್ರೇಷ್ಟ ನಟ ಗುರುತಿಸಿಕೊಂಡಿರುವುದು ಅಪ್ರತಿಮ ಸಾಧನೆಯಾಗಿದೆ. ದೇಶದ ಅನೇಕ ಮಹನೀಯರ ಹೆಸರಿನಲ್ಲಿ ಪಾತ್ರಗಳಿಗೆ ಜೀವ ತುಂಬಿ ಅವರ ವ್ಯಕ್ತಿತ್ವವನ್ನು ಅಜರಾಮರ ಗೊಳಿಸಿದ ಅಮರ ನಟ ಡಾ.ರಾಜಕುಮಾರ್ ಆಗಿದ್ದಾರೆ. ಇವರ ಜನ್ಮದಿನವನ್ನ ಎಲ್ಲರೂ ಅರ್ಥಪೂರ್ಣವಾಗಿ ಆಚರಿಸುವ ಮೂಲಕ ಡಾ.ರಾಜ್‌ರನ್ನು ಸ್ಮರಿಸುವ ಕಾರ್ಯವಾಗಬೇಕಿದೆ ಎಂದರು.

ಈ ವೇಳೆ ಜಿಲ್ಲಾಧಿಕಾರಿ ಕಚೇರಿ ಶಿರೇಸ್ತೆದಾರರಾದ ಸ್ನೇಹಲತಾ, ಪ್ರಿಯ ದರ್ಶಿನಿ, ಸಿಬ್ಬಂದಿ ಶರಣಪ್ಪ ಹಳ್ಳಿಕೇರಿ, ವಾರ್ತಾ ಇಲಾಖೆ ಸಿಬ್ಬಂದಿಗಳಾದ ರಾಮಾಂಜನೇಯ, ಅಶೋಕ್ ಉಪ್ಪಾರ, ತಾಯೇಶ್, ಕಿಶೋರ್, ತಿಪ್ಪೇಶ್, ದೇವರಾಜ್, ಪಿ.ಕೃಷ್ಣಸ್ವಾಮಿ ಇತರರಿದ್ದರು.

# ವಿಜಯನಗರದಲ್ಲಿ ವಿಶೇಷ ಸಂಪುಟ ಸಭೆಗೆ ಸಚಿವ ಜಮೀರ್ ಮನವಿ

■ **ಹಂಪಿ ಟೈಮ್ಸ್ ಬೆಂಗಳೂರು**



ಕಲ್ಯಾಣ ಕರ್ನಾಟಕ ಭಾಗದ ವಿಜಯನಗರದಲ್ಲೂ ವಿಶೇಷ ಸಂಪುಟ ಸಭೆ ನಡೆಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮದ್ ಖಾನ್ ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆದ ಸಂಪುಟ ಸಭೆಯಲ್ಲಿ ಪ್ರಸ್ತಾಪ ಮಾಡಿದರು.

ಮುಂದಿನ ದಿನಗಳಲ್ಲಿ ವಿಜಯಪುರ, ನಂದಿ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ನಡೆಸುವ ಬಗ್ಗೆ ಪ್ರಸ್ತಾಪ ಆದಾಗ ಸಚಿವ ಜಮೀರ್ ಅಹಮದ್ ಖಾನ್ ಅವರು, ನೂತನ ಜಿಲ್ಲೆ ವಿಜಯನಗರದಲ್ಲೂ ವಿಶೇಷ ಸಂಪುಟ ಸಭೆ ನಡೆಸುವಂತೆ ಹಾಗೂ ವಿಜಯನಗರ ಹಾಗೂ ಬಳ್ಳಾರಿ ಅಭಿವೃದ್ಧಿಗೆ ವಿಶೇಷ ಪ್ಯಾಕೇಜ್ ಘೋಷಣೆ ಮಾಡುವಂತೆ ಮನವಿ ಮಾಡಿದರು.

ಸಚಿವರ ಮನವಿಗೆ ಸ್ಪಂದಿಸಿದ ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿ ಯವರು ಈ ಬಗ್ಗೆ ತೀರ್ಮಾನ ಕೈಗೊಳ್ಳುವ ಭರವಸೆ ನೀಡಿದರು.

# ಚಂದ್ರಶೇಖರಪುರ ಗ್ರಾಮದಲ್ಲಿ ನವಜಾತ ಶಿಶು ಮೃತದೇಹ ಪತ್ತೆ

■ **ಹಂಪಿ ಟೈಮ್ಸ್ ಕೂಡ್ಲಿಗಿ**

ತಾಲೂಕಿನ ಚಂದ್ರಶೇಖರಪುರ ಗ್ರಾಮದ ಗಂಗಮ್ಮನ ಬಾವಿ ಹತ್ತಿರ ಚರಂಡಿಯಲ್ಲಿ ಅನಾಥ ನವಜಾತ ಶಿಶುವಿನ ಮೃತದೇಹ ಪತ್ತೆಯಾಗಿದೆ.

ಬುಧವಾರ ಏ.23 ರಂದು ಬೆಳಿಗ್ಗೆ 7:30 ಗಂಟೆಯ ಮಧ್ಯದ ಅವಧಿಯಲ್ಲಿ ಯಾರೋ ಒಬ್ಬ ಮಹಿಳೆ ತನಗೆ ಅವಧಿ ಪೂರ್ವ ಜನಿಸಿದ ಅಥವಾ ಜನನ ಕಾಲದಲ್ಲಿ ಮೃತಪಟ್ಟ ಸುಮಾರು 25–26 ವಾರದ ಗಂಡು ಶಿಶುವನ್ನು ಬೀಸಾಡಲಾಗಿರುವುದು ಹಲವರು ನಾನಾ ಶಂಕೆ ವ್ಯಕ್ತಪಡಿಸಿದ್ದಾರೆ. ಗಂಗಮ್ಮನ ಬಾವಿ ಸಮೀಪದ ಚರಂಡಿಯಲ್ಲಿ ಶಿಶು ಸತ್ತು ಬಿದ್ದಿರುವುದನ್ನು ಗಮನಿಸಿದ ಸ್ಥಳೀಯರು, ಶಿಶುವಿನ ಮೃತದೇಹವನ್ನು ನೋಡಿ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಗುಡೇಕೋಟೆ ಪೋಲೀಸ್ ಠಾಣಾ ಪೋಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದ್ದು, ಬಿಟ್ಟು ಹೋದ ಮಹಿಳೆಯ ಮೇಲೆ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಲು ಈ ಸಂಬಂಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ ತನಿಖೆ ಕೈಗೊಂಡಿದೆ.

# ಉಜ್ಜಯಿನಿಯಲ್ಲಿ ರಥೋತ್ಸವ ಶಾಂತಿ ಸಭೆ

■ **ಹಂಪಿ ಟೈಮ್ಸ್ ಕೊಟ್ಟೂರು:** ಉಜ್ಜಯಿನಿ ಸದ್ಧರ್ಮ ಪೀಠದ ಶ್ರೀ ಮರುಳಸಿದ್ದೇಶ್ವರ ಸ್ವಾಮಿಯ ರಥೋತ್ಸವವನ್ನು ಮೇ–2 ರಂದು ಸಕಲ ಭಕ್ತಾದಿಗಳು ಶಾಂತತೆಯಿಂದ ಭಕ್ತಿ ಹಾಗೂ ಸಂಭ್ರಮದೊಂದಿಗೆ ಆಚರಣೆ ಮಾಡಬೇಕು ಎಂದು ಕೂಡ್ಲಿಗಿ ಡಿವೈಎಸ್ಪಿ ಮಲ್ಲೇಶ ದೊಡ್ಡಮನಿ ಹೇಳಿದರು.

ಗುರುವಾರ ಶಾಂತಿ ಸಭೆಯಲ್ಲಿ ಮಾತನಾಡಿದರು. ಈ ವೇಳೆ ಕೊಟ್ಟೂರು ಸಿ ಪಿ ಐ ವೆಂಕಟಸ್ವಾಮಿ, ಪಿಎಸ್ಐ ಗೀತಾಂಜಲಿ ಸಿಂಧೆ, ಗ್ರಾಪಂ ಪಿಡಿಒ ಉಮಾಪತಿ, ಗ್ರಾಪಂ ಉಪಾಧ್ಯಕ್ಷ ರೇವಣ್ಣ, ಕಾಳಾಪುರ ಗ್ರಾಪಂ ಉಪಾಧ್ಯಕ್ಷ ಮಂಜುನಾಥ, ಗ್ರಾಮಗಳ ಮುಖಂಡರು ಇದ್ದರು.






# ಏ.27 ಸಂಗೀತ ಭಾರತಿ ಶಂಕರ ತತ್ವ 400ನೇ ಮಾಸಿಕ ಚಿಂತನ ಸಂಭ್ರಮ

## 15 ಬಹುಮುಖ ಪ್ರತಿಭೆಗಳಿಗೆ ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ

■ **ಹಂಪಿ ಟೈಮ್ಸ್ ಹೊಸಪೇಟೆ**



ನಗರದ ಚಿತ್ತವಾಡ್ಗಿಯ ಅತ್ಯುತ್ತಮ ಸಂಘಟನಾ ಪ್ರಶಸ್ತಿ ಪುರಸ್ಕೃತ ಸಂಸ್ಥೆ ಸಂಗೀತ ಭಾರತಿ, ವಿಜಯನಗರ ಜಿಲ್ಲಾ ಅದ್ವೈತ ಮಹಾ ಸಭಾವತಿಯಿಂದ 34ನೇ ವರ್ಷದ ಶಂಕರ ತತ್ವ 400ನೇ ಮಾಸಿಕ ಚಿಂತನ ಸಂಭ್ರಮ ಏ.27 ರಂದು ಸಂಜೆ 6ಕ್ಕೆ ನಗರದ ಹೋಟೆಲ್ ಮಲ್ಲಿಗೆ ಸಭಾಂಗಣದಲ್ಲಿ ಜರುಗಲಿದೆ ಎಂದು ಸಂಗೀತ ಭಾರತಿಯ ಸಂಸ್ಥಾಪಕ ಹೆಚ್.ಪಿ.ಕಲ್ಲಂಭಟ್ ತಿಳಿಸಿದ್ದಾರೆ.

400ನೇ ವಿಸೇಷ ಮಾಸಿಕ ಚಿಂತನದಲ್ಲಿ ಜನಪ್ರಿಯ ಕರ್ನಾಟಕ ಶಾಸ್ತ್ರೀಯ ಸಂಗೀತ ಕಲಾವಿದೆ ಬೆಂಗಳೂರಿನ ವಿದುಷಿ ಸ್ಮಿತಾ ದೇವಸಿಂಹ, ಜನಪ್ರಿಯ ಮೃದಂಗ ಮತ್ತು ಘಟ ವದ್ಯಗಾರರಾದ ಬೆಂಗಳೂರಿನ ವಿದ್ವಾನ್ ಎನ್.ಎಸ್.ಕೃಷ್ಣಪ್ರಸಾದ್ ಸೇರಿದಂತೆ 15 ಜನ ಬಹುಮುಖ ಪ್ರತಿಭೆಗಳಿಗೆ ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ.

ಸಂಜೆ 5ಕ್ಕೆ ಸುರೇಶ್ ಸೌಂಡ್ಸ್ ವತಿಯಿಂದ ಹಳೆಯ ಕನ್ನಡ ಚಿತ್ರೆಗಳು, ಸಂಜೆ 6ಕ್ಕೆ ನಾಟ್ಯ ನಾದ ಕಲಾ ಕುಟೀರದಿಂದ ಭರತನಾಟ್ಯ ಸಂಭ್ರಮ, ಸಂಜೆ 6.15ಕ್ಕೆ ಶಂಕರ ತತ್ವ ಚಿಂತನೆ, ಸಂಜೆ 6.20ಕ್ಕೆ 400ನೇ ಸಂಭ್ರಮದ ಅನಿಸಿಕೆ, ಸಂಜೆ 7.15ಕ್ಕೆ 34ನೇ ವರ್ಷದ ಚಿಂತನ ಸಂಭ್ರಮದಲ್ಲಿ ರಾಜ್ಯಮಟ್ಟದ ವಿಶೇಷ ಪ್ರಶಸ್ತಿ ಅಭಿನಂದನಾ ಸಮಾರಂಭ ಜರುಗಲಿದೆ.

# ಹಾವು ಕಡಿದಾಗ ಗಾಬರಿಗೊಳ್ಳಬೇಡಿ ತಕ್ಷಣವೇ ಚಿಕಿತ್ಸೆ ಕೊಡಿಸಿ ಜೀವ ಉಳಿಸಿ

## ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ.ವಿ.ಕೆ ಹೇಳಿಕೆ | ಹಾವು ಕಡಿತ ಜಾಗೃತಿ



■ **ಹಂಪಿ ಟೈಮ್ಸ್ ಬಳ್ಳಾರಿ**

ಹಾವು ಕಡಿತಕ್ಕೊಳಗಾದ ವ್ಯಕ್ತಿಯನ್ನು ಗಾಬರಿಗೊಳಿಸದೆ, ಅವರೊಂದಿಗೆ ಶಾಂತವಾಗಿ ವರ್ತಿಸಿ, ಹತ್ತಿರದ ಆಸ್ಪತ್ರೆಗೆ ತಕ್ಷಣವೇ ಕರೆದುಕೊಂಡು ಬಂದು ಚುಚ್ಚುಮದ್ದು ಕೊಡಿಸುವ ಮೂಲಕ ಜೀವ ಹಾನಿಯಾಗದಂತೆ ಮಾಡಲು ಕೈ ಜೋಡಿಸಿ ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ.ವಿ.ಕೆ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಸರ್ವೇಕ್ಷಣಾ ಘಟಕ ಹಾಗೂ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಗುಗ್ಗರಹಟ್ಟಿ ಇವರ ಸಂಯುಕ್ತಾಶ್ರಯದಲ್ಲಿ ನಗರದ ಮುಂಡ್ರಿಗಿ ಬಡಾವಣೆಯಲ್ಲಿ ಗುರುವಾರ ಏರ್ಪಡಿಸಿದ್ದ "ಹಾವು ಕಡಿತ ಕುರಿತು ಜಾಗೃತಿ" ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಹಾವು ಕಚ್ಚಿದಾಗ ಗಾಬರಿಯಾಗುವುದು ಸಾಮಾನ್ಯವಾಗಿದ್ದು, ಇದರಿಂದ ವ್ಯಕ್ತಿಯ ಜೀವಕ್ಕೆ ಅಪಾಯವಾಗುವ ಸಾಧ್ಯತೆ ಇರುತ್ತದೆ. ಅದರಲ್ಲೂ ವಿಷಕಾರಿ ಹಾವು ಕಡಿತದ ಸಂದರ್ಭದಲ್ಲಿ ವ್ಯಕ್ತಿಯನ್ನು ಯಾವುದೇ ವಾಹನ ಅಥವಾ 108 ಅಂಬುಲೆನ್ಸ್ ಮೂಲಕ ಹತ್ತಿರದ ಆಸ್ಪತ್ರೆಗೆ ಕರೆದುಕೊಂಡು ಹೋಗಲು ಮೊದಲ ಆದ್ಯತೆ ನೀಡಬೇಕು ಎಂದರು.

ವೈದ್ಯಾಧಿಕಾರಿ ಡಾ.ಕಾಶೀಪ್ರಸಾದ್ ಮಾತನಾಡಿ, ಹಾವು ಕಚ್ಚಿದಾಗ ಕಚ್ಚಿದ ಜಾಗದ ಪಕ್ಕದಲ್ಲಿ ಬಟ್ಟೆಯನ್ನು ಕಟ್ಟುವುದು, ಬ್ಲೇಡ್ ಅಥವಾ ಚಾಕುವಿನಿಂದ ಗಾಯ ಮಾಡುವುದು, ಗಾಯವನ್ನು ಸುಡುವುದು, ನಾಟಿ ಔಷಧಿಗಳನ್ನು ನೀಡುವುದು ಮುಂತಾದವುಗಳನ್ನು ಮಾಡಬೇಡಿ ಎಂದು ಸಾರ್ವಜನಿಕರಲ್ಲಿ ವಿನಂತಿಸಿದರು.

**ಹಾವು ಕಚ್ಚಿದಾಗ ತೆಗೆದುಕೊಳ್ಳಬೇಕಾದ ಕ್ರಮಗಳು:**

ಹಾವು ಕಚ್ಚಿದಾಗ ರೋಗಿಯನ್ನು ಕೂರಿಸಿ ಹಾವು ಕಚ್ಚಿರುವ ಭಾಗ ಹೃದಯದ ಕೆಳಗೆ ಬರುವ ಹಾಗೆ ಇರಲಿ ರಕ್ತಪರಿಚಲನೆಗೆ ತಡೆಯಾಗುವಂತಹ ಕೈ ಗಡಿಯಾರ, ಬಳೆ, ಉಂಗುರ ಮುಂತಾದವುಗಳನ್ನು ತೆಗೆದು, ಕಚ್ಚಿದ ಭಾಗವು ಅಲುಗಾಡದಂತೆ ನೋಡಿಕೊಳ್ಳಬೇಕು. ಮುಖ್ಯವಾಗಿ ಆಸ್ಪತ್ರೆಗೆ ಹೋಗುವಾಗ ವ್ಯಕ್ತಿಯ ರೋಗ ಲಕ್ಷಣಗಳಾದ ತೇಲುಗಣ್ಣು, ಕಣ್ಣು ಮುಚ್ಚುವುದು, >>3

## ಕನ್ನಡದ ರಾಜಮುಕುಟ ಡಾ. ರಾಜ್



ಗಾನ ಗಂಧರ್ವ, ರಸಿಕರ ರಾಜ, ರಣಧೀರ ಕಂಠೀರವ, ಮಯೂರ, ಇಮ್ಮಡಿ ಪುಲಿಕೇಶಿ ಶ್ರೀ ಕೃಷ್ಣ ದೇವರಾಯರಾಗಿ ಕನ್ನಡದ ಬೆಳ್ಳಿ ಪರದೆ ಮೇಲೆ ರಾರಾಜಿಸಿದ ಕನ್ನಡ ಮೇರು ನಟ ಡಾಕ್ಟರ್ ರಾಜಕುಮಾರ್. ಡಾಕ್ಟರ್ ರಾಜ್ ಕುಮಾರ್ ಕನ್ನಡದ ಜನತೆ ಕಂಡ ಅತ್ಯಂತ ಧೀಮಂತ ವ್ಯಕ್ತಿ ಎಂಬ ಕೀರ್ತಿಗೆ ಪಾತ್ರರಾಗಿದ್ದಾರೆ. ಕನ್ನಡಿಗರ ಜನ ಮಾನಸದಲ್ಲಿ ನೆಲೆ ನಿಂತ ರಾಜ್ ಕುಮಾರ್ ರಂತಹವರು ಮತ್ತೊಮ್ಮೆ ಅವರೇ ಹುಟ್ಟಿ ಬರಬೇಕು. ಪ್ರಾರಂಭದಲ್ಲಿ ರಾಜ್ ಕುಮಾರ್ ಅವರು ಗುಬ್ಬಿ ನಾಟಕ ಕಂಪನಿಯಲ್ಲಿ ಹಗಲು ರಾತ್ರಿ ನಾಟಕಗಾರರಾಗಿ ಕೆಲಸ ಮಾಡಿ ನಂತರ ಬೇಡರ ಕಣ್ಣಪ್ಪ ಎಂಬ ಚಿತ್ರದಲ್ಲಿ ಬೇಡರ ಕಣ್ಣಪ್ಪನ ಪಾತ್ರದಲ್ಲಿ ಕನ್ನಡದ ಮೊಟ್ಟ ಮೊದಲ ಚಿತ್ರದಲ್ಲಿ ನಟಿಸಿದ್ದಾರೆ. ಅಲ್ಲಿಂದ ಪ್ರಾರಂಭವಾದಂತಹ ಚಿತ್ರರಂಗದ ಪ್ರವೇಶ ಅನೇಕ ಭಕ್ತಿ ಪಾತ್ರಗಳಲ್ಲಿ ಸಾಕಷ್ಟು ಹೆಸರು ಕೀರ್ತಿ ತಂದುಕೊಟ್ಟವು.

ಅದರಲ್ಲಿ ಭಕ್ತ ಕುಂಬಾರ ಬಬ್ರುವಾಹನ ಭಕ್ತ ಪ್ರಹ್ಲಾದ ಬಂಗಾರದ ಮನುಷ್ಯ, ಕಸ್ತೂರಿ ನಿವಾಸ, ಸತ್ಯ ಹರಿಶ್ಚಂದ್ರ, ಓಹಿಲೇಶ್ವರ ಮುಂತಾದ ಪೌರಾಣಿಕ ಮತ್ತು ಸಾಮಾಜಿಕ ಚಲನಚಿತ್ರಗಳಲ್ಲಿ ತಮ್ಮ ಮನೋಜ್ಞ ಅಭಿನಯದಿಂದ ಎಲ್ಲರ ಮನ ಮನೆಗಳಲ್ಲಿ ಬೇರೂರಿದರು. ಯುಗ ಯುಗದಲ್ಲಿ ಮಾಸದ ಹೆಸರು ಡಾಕ್ಟರ್ ರಾಜ್ ಕುಮಾರ್ ರವರದು ತಾವು ನಟಿಸಿದ ಚಿತ್ರಗಳಲ್ಲಿ

ಸಂಸಾರದಲ್ಲಿ ದಾಂಪತ್ಯ ಜೀವನ, ಕಾಲೇಜಿನ ಯುವಕ –ಯುವತಿಯರಿಗೆ

ಉತ್ತಮ ಸಂದೇಶವನ್ನು ನೀಡುವ, ತಂದೆ ತಾಯಿಗಳಲ್ಲಿ ಜವಾಬ್ದಾರಿಗಳ ಬಗ್ಗೆ, ಒಡಹುಟ್ಟಿದವರು, ಅಣ್ಣ ತಂಗಿ, ಬಾಂಧವ್ಯಗಳ ಬಗ್ಗೆ ಮಗನಾಗಿ ನಿಂತ ರಾಜ್ ಕುಮಾರ್ ರವರ ಅಭಿನಯ ನೋಡಿ ಉತ್ತಮ ರೀತಿಯಲ್ಲಿ ಬದಲಾದ ಸಾಕಷ್ಟು ಉದಾಹರಣೆಗಳಿವೆ, ಬರೀ ನಟನೆಯಲ್ಲದೆ ಗಾನದಲ್ಲೂ ತಮ್ಮದೇ ಆದ ಛಾಪು ಮೂಡಿಸಿದ್ದಾರೆ ಭಕ್ತಿಗೀತೆ, ಜಾನಪದ ಗೀತೆ, ಭಾವಗೀತೆ, ಚಿತ್ರಗೀತೆಗಳಲ್ಲಿ ರಾಗ ರಸದ ಸವಿಯನ್ನು ಸೇರಿಸಿ ಜೇನಿನ ಹೊಳೆಯನ್ನು ಹರಿಸಿ ಎಲ್ಲರಿಗೂ ಅದರ ಆನಂದವನ್ನು ಸವಿಯಲು ಅನುವು ಮಾಡಿದ ಅತ್ಯುತ್ತಮ ಗಾಯಕರು.

ಇನ್ನು ಕನ್ನಡ ನಾಡ ನುಡಿ, ಭಾಷೆ, ನೆಲ, ಜಲದ ಸಮಸ್ಯೆ ಬಂದಾಗ ಮುಂಚೂಣಿಯಲ್ಲಿ ನಿಂತು ಹೋರಾಟದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುತ್ತಿದ್ದರು. ಡಾಕ್ಟರ್ ರಾಜ್ ಕುಮಾರ್ ರವರು ಅನೇಕ ಚಿತ್ರಗಳನ್ನು ನಿರ್ದೇಶಿಸಿದ್ದಾರೆ. ಅವರ ಈ ಕಲಾ ಸೇವೆಗಾಗಿ ಸಾಗರೋಪಾದಿಯಲ್ಲಿ ಪ್ರಶಸ್ತಿ ಪುರಸ್ಕಾರಗಳು ಹರಿದು ಬಂದಿವೆ , ಗೌರವ ಡಾಕ್ಟರೇಟ್, ದಾದಾ ಸಾಹೇಬ್ ಪಾಲ್ಕೆ, ಮುಂತಾದ ಶ್ರೇಷ್ಠ ಪ್ರಶಸ್ತಿಗಳನ್ನು ಪಡೆದ ಕನ್ನಡದ ಶ್ರೇಷ್ಠ ನಟರು. ಅವರ ಹೆಸರು ಕನ್ನಡ ಚಿತ್ರರಂಗದಲ್ಲಿ ಚಿರಾಸ್ತಾಯಿಯಾಗಿ ಉಳಿದಿದೆ. ಅವರ ಈ ಕಲಾ ಸೇವೆಯು ಕನ್ನಡ ಚಿತ್ರರಂಗದಲ್ಲಿ ಮುಂದುವರೆಯಬೇಕೆಂಬ ಮಹಾದಾಸೆಯಿಂದ ತಮ್ಮ ಮೂವರು ಗಂಡು ಮಕ್ಕಳನ್ನು ತಮ್ಮ ನಟನೆ ಗಾಯನ ನಿರ್ದೇಶನ ಮಾಡುವಂತೆ ಪ್ರೇರೇಪಿಸಿದ್ದಾರೆ.

ಶಿವಣ್ಣ, ರಾಘಣ್ಣ, ನಮ್ಮೆಲ್ಲರ ಪ್ರೀತಿಯ ಅಪ್ಪು ಪುನೀತ್ ಇವರು ಮೂವರು ರಾಜಣ್ಣನವರು ನಮ್ಮ ಕನ್ನಡ ಜನತೆಗಾಗಿ ಕೊಟ್ಟ ಮೂರು ರತ್ನಗಳು. ತಂದೆಯ ಹಾದಿಯಲ್ಲಿ ಸಾಗಿ ಅವರ ಮಾತಿನಂತೆ ನಡೆಯುತ್ತಾ ತಮ್ಮ ತನು ಮನ ಧನವನ್ನು ಕನ್ನಡ ಜನತೆಗೆ ಅರ್ಪಿಸಿ ಕನ್ನಡಿಗರ ಹೃದಯದಲ್ಲಿ ನೆಲೆ ನಿಂತಿದ್ದಾರೆ. ಇಂತಹ ಇಡೀ ಕುಟುಂಬವೇ ಕನ್ನಡ ಚಿತ್ರರಂಗ ಪ್ರವೇಶ ಮಾಡುವಂತೆ ಮಾಡಿ ಅಭಿಮಾನಿಗಳೇ ನನ್ನ ದೇವರ ಎಂದ ಡಾಕ್ಟರ್ ರಾಜ್ ಕುಮಾರ್ ಮತ್ತೊಮ್ಮೆ ಇಲ್ಲಿ ಹುಟ್ಟಿಬರಲಿ



ಅಣ್ಣಾ ನೀವು ನಮ್ಮ ನಾಡಿನ ರಾಜ ಮುಕುಟ

– ಜಿ.ಆರ್.ಬಸವರಾಜೇಶ್ವರಿ, ಶಿಕ್ಷಕಿ

## ನೀವೂ ಬರೆಯಬಹುದು

ಹಂಪಿ ಟೈಮ್ಸ್ ಪತ್ರಿಕೆ ಆರಂಭಿಸಿದ್ದು ನಾವಾದರೂ, ಕೈಹಿಡಿದು ನಡೆಸುವವರು ನೀವು. ನಮ್ಮ ಇಚ್ಛೆಯೂ ಒಳಗೊಂಡಂತೆ ನಿಮ್ಮ ಆಶಯಗಳಿಗೆ ತಕ್ಕಂತೆ ಪತ್ರಿಕೆಯನ್ನು ರೂಪಿಸುವ ಹೊಣೆಗಾರಿಕೆ, ಜವಾಬ್ದಾರಿಯೂ ನಮ್ಮದಾಗಿದೆ. ಇಲ್ಲಿ ಕೇವಲ ನಮ್ಮ ಬರವಣಿಗೆ ಅಷ್ಟೇ ಅಲ್ಲದೇ, ಬರಹಗಾರರಾಗಿದ್ದರೆ ನೀವೂ ಕೂಡ ನಿಮ್ಮ ಬರಹವನ್ನಿಲ್ಲಿ ಓದಬಹುದು. ಈ ನಿಟ್ಟಿನಲ್ಲಿ ನಿಮ್ಮಿಂದ ಕತೆ, ಕವನ, ವಿವಿಧ ಪ್ರಕಾರದ ಸಾಹಿತ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಪರ ಚಿಂತನೆ ಒಳಗೊಂಡ ಲೇಖನಗಳನ್ನು ನಾವು ನಿರೀಕ್ಷಿಸುತ್ತಿದ್ದೇವೆ. ಜೊತೆಗೆ ಬಹುಮುಖ್ಯವಾಗಿ ಈ ನೆಲದ ಜನರ ಧ್ವನಿಯಾಗುವ ಹಂಬಲದಿಂದ ಸಾರ್ವಜನಿಕ ಕುಂದು ಕೊರತೆಗಳನ್ನು ಹೇಳಿಕೊಳ್ಳಬಹುದು. ಓದುಗ ಪ್ರಭುಗಳಾದ ನೀವು ಪತ್ರಿಕೆಯ ಭಾಗವೂ ಹೌದು. ಹೀಗಾಗಿ ನಿಮ್ಮ ಪ್ರತಿಕ್ರಿಯೆಯೂ ನಮಗೆ ಅತ್ಯಮೂಲ್ಯ. **ಕಥೆ, ಕವನ, ಸಾಹಿತ್ಯ, ತಂತ್ರಜ್ಞಾನ, ಆರೋಗ್ಯ, ಶಿಕ್ಷಣ, ಕ್ರೀಡೆ, ಕೃಷಿ, ಅಪರೂಪದ ವ್ಯಕ್ತಿಗಳು, ಅಂಕಣ, ಮಹಿಳೆ ಮತ್ತು ಮಕ್ಕಳು ಸೇರಿದಂತೆ ವಿವಿಧ ಕ್ಷೇತ್ರಗಳ** ಕುರಿತಾದ ನಿಮ್ಮ ಬರಹಗಳನ್ನೆಲ್ಲ ಸ್ವೀಕರಿಸುತ್ತೇವೆ ಆದರೆ, ಕಳುಹಿಸಿದ ಬರಹಗಳಲ್ಲಿ ಸಮಂಜಸ ಎನಿಸುವುದಷ್ಟೇ ಪ್ರಕಟಿಸುತ್ತೇವೆ. ನಮ್ಮ ನಂಬುಗೆಯ ಸಮಾಜಕ್ಕಾಗಿ ಒಳಿತನ್ನೇ ಬಯಸುತ್ತ, ಬರೆಯುತ್ತ ಎಲ್ಲರೂ ಒಳ ಗೊಳ್ಳೋಣ.

### ಬೆಳಕಿನ ಹಾದಿ

ರಾಮಾಯಣ, ಮಹಾಭಾರತ, ಸಾಧು ಸಂತರು, ವಿಜ್ಞಾನಿ, ಹೀಗೆ ಪುಣ್ಯ ಪುರುಷರ ಜೀವನದಲ್ಲಿ ನಡೆದ ಘಟನೆಗಳು ಅಥವಾ ನೈತಿಕ ಕಥೆಗಳನ್ನು ಬರೆದು, ಕೊನೆಗೆ ಅಂತಹ ಕಥೆಯಿಂದ ನಮಗೆ ತಿಳಿಯುವ ಮೌಲ್ಯದ ಬಗ್ಗೆ 250 ಪದಗಳ ಮಿತಿಯಲ್ಲಿ ಬೆಳಕಿನ ಹಾದಿ ವಿಭಾಗಕ್ಕೆ ಬರೆದು ಕಳುಹಿಸಿ. ಸೂಕ್ತವಿದ್ದಲ್ಲಿ ಪ್ರಕಟಿಸುತ್ತೇವೆ. ಹೊಸ ಬರಹಗಾರರಿಗೆ ಅವಕಾಶ ಸಿದ್ಧವಾಗಿದೆ.

–: ಸಂಪಾದಕರು :–
ಹಂಪಿ ಟೈಮ್ಸ್, ಶ್ರೀ ಓಂಕಾರೇಶ್ವರ ದೇವಸ್ಥಾನದ ಪಕ್ಕದಲ್ಲಿ, ವಾಲ್ಮೀಕಿ ವೃತ್ತದ ಹತ್ತಿರ, ಹೊಸಪೇಟೆ, ವಿಜಯನಗರ ಜಿಲ್ಲೆ.
ಇ–ಮೇಲ್:hampitimes@gmail.com
M: 94486 33038

## ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರ ರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

– ಜಾಹೀರಾತು ವ್ಯವಸ್ಥಾಪಕರು.

# ಇಂದು ಮಕ್ಕಳಿಗೆ ಬೇಕಿರುವುದು

## ಮಾಹಿತಿ ಆಧಾರಿತ ಶಿಕ್ಷಣವೋ? ಮೌಲ್ಯಾಧಾರಿತ ಶಿಕ್ಷಣವೋ?

ಇಂದಿನ ದಿನಮಾನಗಳಲ್ಲಿ ಶಿಕ್ಷಣದ ಪ್ರಮುಖ ಆಶಯ ಏನಾಗಿರಬೇಕೆಂಬ ಪ್ರಶ್ನೆ ಮತ್ತೆ ಮತ್ತೇ ನಮ್ಮನ್ನು ಕಾಡುತ್ತಿದೆ. ಪಠ್ಯ ಪುಸ್ತಕದಲ್ಲಿ ಅಡಕವಾಗಿರುವ ಮಾಹಿತಿಯನ್ನು ಪ್ರಶ್ನೋತ್ತರ ರೂಪದಲ್ಲಿ ಬಾಯಿ ಪಾಠ ಮಾಡಿ, ಪರೀಕ್ಷೆಗಳಲ್ಲಿ ಬರೆದು 100 ಕ್ಕೆ 100 ಅಂಕ ಗಳಿಸಿದರೆ ಮುಗಿಯಿತೇ? ಕೇವಲ ಅಂಕಗಳ ಮೂಲಕ ವ್ಯಕ್ತಿಯ ವ್ಯಕ್ತಿತ್ವವೆಲ್ಲವನ್ನು ಅಳೆಯಬಹುದೇ? ಅದು ನಿಜವಾದ ಶಿಕ್ಷಣವೇ? ಇದರ ಕುರಿತು ಯೋಚಿಸಬೇಕಾದ ಅಗತ್ಯವಿದೆ. ಉತ್ತಮ ಸುಸಂಸ್ಕೃತ ಬದುಕನ್ನು ರೂಪಿಸಿಕೊಳ್ಳಲು ಮೌಲ್ಯಗಳು ಬೇಕು... ಆದರೆ ಇಂದಿನ ಶಿಕ್ಷಣ ವ್ಯವಸ್ಥೆಯಲ್ಲಿ ಮೌಲ್ಯಗಳನ್ನು ಮಕ್ಕಳಲ್ಲಿ ಬೆಳೆಸುವ ಬಗ್ಗೆ ನಾವು ಹೆಚ್ಚು ಒತ್ತು ಕೊಟ್ಟಿದ್ದೇವೆಯೇ ಅಥವಾ ಮಾಹಿತಿಯ ಸರಕನ್ನು ಅವರಲ್ಲಿ ತುಂಬುತ್ತಿದ್ದೇವೆಯೋ ಎನ್ನುವುದರ ಕುರಿತೂ ಆಲೋಚಿಸ ಬೇಕಾಗಿದೆ.

ಮೌಲ್ಯಗಳಿಲ್ಲದ ಶಿಕ್ಷಣ–ಲಂಗು ಲಗಾಮಿಲ್ಲದ ಕುದುರೆ ಗಾಡಿಯ ಓಟದಂತೆ.. ಯಾವಾಗ ಬೇಕಾದರೂ ಕುದುರೆ ಗಾಡಿ ಕೆಳಗುರುಳಿ ಬೀಳಬ ಹುದು. ಮೌಲ್ಯಗಳಿಲ್ಲದ ಬದುಕು ನಿರರ್ಥಕವೇ ಸರಿ. ಕೆಲವು ಸನ್ನಿ ವೇಶ ಗಳನ್ನು ಗಮನಿಸೋಣ.

**ಸನ್ನಿವೇಶ ಒಂದು :** ಒಂದು ಬಸ್ ಹೆಚ್ಚು ಸಂಖ್ಯೆಯ ಪ್ರಯಾಣಿಕರಿಂದ ಕೂಡಿದೆ. ಅದರಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಹೈಸ್ಕೂಲ್, ಕಾಲೇಜ್ ವಿದ್ಯಾರ್ಥಿಗಳೇ ತುಂಬಿದ್ದಾರೆ. ಆ ಬಸ್ಸಿಗೆ ಒಬ್ಬ ಮಹಿಳೆ 9 ತಿಂಗಳ ಹಸುಗೂಸಿನೊಂದಿಗೆ ಹತ್ತಿಕೊಳ್ಳುತ್ತಾರೆ..ಬಸ್ ನ ಒಳಗಡೆ ಹೆಚ್ಚು ಆಸನಗಳಲ್ಲಿ ವಿದ್ಯಾರ್ಥಿಗಳೇ ಕುಳಿತಿದ್ದಾರೆ. ಆ ಮಹಿಳೆಗೆ ಮಗುವಿನೊಂದಿಗೆ ನಿಂತು ಪ್ರಯಾಣಿಸಲು ಕಷ್ಟವಾಗುತ್ತಿದೆ,ಆಕೆ ತನಗೆ ಯಾರಾದರೂ ಆಸನ ಬಿಟ್ಟು ಕೊಡುತ್ತಾರೋ ಎಂದು ವಿದ್ಯಾರ್ಥಿಗಳ ಕಡೆಗೆ ನೋಡುತ್ತಾರೆ..ಆಸನ ಬಿಟ್ಟು ಕೊಡುವಂತೆ ಕೇಳುತ್ತಾರೆ.ಆದರೆ ಯಾರೊಬ್ಬರೂ ಎದ್ದು ಆಕೆಗೆ ಆಸನ ಬಿಟ್ಟುಕೊಡುವುದಿಲ್ಲ.

**ಸನ್ನಿವೇಶ ಎರಡು :** ಅದೊಂದು ಕಾಲೇಜಿನಲ್ಲಿ ಪರೀಕ್ಷೆ ನಡೆಯುತ್ತಿದೆ. ಪರೀಕ್ಷಾ ಕೇಂದ್ರದಲ್ಲಿ ನಕಲು ಹಾವಳಿಯನ್ನು ತಡೆಯಲು ಪೊಲೀಸರನ್ನು ನಿಯೋಜಿಸಲಾಗಿದೆ. ಹಾಗಿದ್ದರೂ ಕೆಲವು ಯುವಕರು ನಕಲು ಚೀಟಿಗಳನ್ನ ಪರೀಕ್ಷೆ ಬರೆಯುವವರಿಗೆ ಕೊಡಲು ಪರೀಕ್ಷೆ ಕೇಂದ್ರದ ಹಿಂಭಾಗದಲ್ಲಿ ಕಾಂಪೌಂಡ್ ಮೇಲೆ ಹತ್ತಿ, ಪರೀಕ್ಷಾ ಕೊಠಡಿಯ ಕಿಟಕಿಯೊಳಗೆ ನಕಲು ಚೀಟಿಗಳನ್ನು ಎಸೆಯುತ್ತಾರೆ. ಅದರಲ್ಲಿ ಒಬ್ಬ ಯುವಕ ಪೊಲೀಸರ ಕೈಗೆ ಸಿಕ್ಕಿ ಬೀಳುತ್ತಾನೆ, ಅವನಿಂದ ನಕಲು ಚೀಟಿಗಳನ್ನು ಕಸಿಯಲು ಹೋದಾಗ, ಆ ಪೋಲೀಸರ ಮೇಲೆ ಕೈ ಮಾಡುತ್ತಾನೆ. ಅವರ ತಲೆಯ ಭಾಗಕ್ಕೆ ಕಲ್ಲಿನಿಂದ ಹೊಡೆಯುತ್ತಾನೆ. ಆ ಪೋಲೀಸರ ತಲೆಯಲ್ಲಿ ಗಾಯವಾಗಿ ರಕ್ತಸ್ರಾವವಾಗುತ್ತದೆ.

**ಸನ್ನಿವೇಶ ಮೂರು:**

ರಾಷ್ಟ್ರೀಯ ಹೆದ್ದಾರಿಯ ಲ್ಲೊಂದು ಭೀಕರ ಅಪಘಾತ ವಾಗಿದೆ. ಬೈಕ್ ಸವಾರನೊಬ್ಬ ಎದುರಿಗೆ ಬರುತ್ತಿದ್ದ ಲಾರಿಗೆ ಢಿಕ್ಕಿ ಹೊಡೆದಿದ್ದಾನೆ.. ಪರಿಣಾಮ ಅವನ ಕೈ ಕಾಲು ಮುರಿದಿದೆ,ತಲೆಗೆ ಗಾಯ ವಾಗಿ ರಕ್ತ ಹರಿಯುತ್ತಿದೆ.ಅವನು ತನ್ನ ಪ್ರಾಣ ಉಳಿಸುವಂತೆ ಅಂಗಲಾಚು ತ್ತಿದ್ದಾನೆ,ಇದನ್ನು ನೋಡಿದ ರಸ್ತೆಯ ಬದಿಯಲ್ಲಿ ನಿಂತಿದ್ದ ಜನ ಅವನಿಗೆ ಸಹಾಯ ಮಾಡುವ ಬದಲು ಅಪಘಾ ತದ ದೃಶ್ಯವನ್ನು ತಮ್ಮ ತಮ್ಮ ಮೊಬೈಲ್ ಗಳಲ್ಲಿ ಸೆರೆ ಹಿಡಿಯುತ್ತಿದ್ದಾರೆ. ಆ ವಿಡಿಯೋ, ಫೋಟೋಗಳನ್ನು ಬೇರೆಯವರ ಮೊಬೈಲ್ಗೆ ಕಳಿಸುತ್ತಿದ್ದಾರೆ.ಸಾಮಾಜಿಕ ಜಾಲ ತಾಣಗಳಲ್ಲಿ ಹಂಚುತ್ತಿದ್ದಾರೆ.

**ಸನ್ನಿವೇಶ ನಾಲ್ಕು :** ದೊಡ್ಡ ಹುದ್ದೆಯಲ್ಲಿ ಕೈ ತುಂಬಾ ಸಂಬಳ ಪಡೆಯುವ ಮಗ, ಹೆಂಡತಿಯ ಮಾತು ಕೇಳಿ, ತನ್ನ ಬದುಕನ್ನು ರೂಪಿಸಿದವರು ಹೆತ್ತವರೆನ್ನುವುದನ್ನೇ ಮರೆತು ಇಳಿಗಾಲದಲ್ಲಿ ತನ್ನ ವೃದ್ಧ ತಂದೆ–ತಾಯಿಗಳನ್ನು ವೃದ್ಧಾಶ್ರಮಕ್ಕೆ ಸೇರಿಸಲು ನಿರ್ಧಾರ ಮಾಡುತ್ತಾನೆ.ಇದನ್ನು ಅರಿತ ಆ ಹಿರಿಯ ದಂಪತಿಗಳು ತಮ್ಮ ಮಗ ಸೊಸೆಗೆ ತಾವು ಭಾರವಾಗಬಾರದೆಂದು ಮಗನಿಂದ ದೂರ ಹೋಗಿ ತಮ್ಮ ಹಳ್ಳಿಯಲ್ಲಿ ನೆಲೆಸುತ್ತಾರೆ.



ಜಿ. ಜಗದೀಶ.
ಶಿಕ್ಷಕರು. ಶಿವಪುರ

Scan For Digital Colourful
HAMPI TIMES E-paper

ಈ ಮೇಲಿನ 4 ಸನ್ನಿವೇಶಗಳನ್ನು ಗಮನಿಸಿದಾಗ ನಮ್ಮ ಸಮಾಜ ಎತ್ತ ಸಾಗುತ್ತಿದೆ ಎನ್ನುವ ಪ್ರಶ್ನೆ ಮೂಡುತ್ತದೆ. ಈ ರೀತಿಯಲ್ಲಿ ಸಮಾಜ ಸಂವೇದನಾರಹಿತವಾಗುತ್ತಿರುವುದಕ್ಕೆ,ಅಪಮೌಲ್ಯಕ್ಕೊಳಗಾಗುತ್ತಿರುವುದಕ್ಕೆ, ಮಾನವೀಯತೆಯಿಂದ ದೂರ ಉಳಿಯುತ್ತಿರುವುದಕ್ಕೆ ಮೌಲ್ಯಗಳನ್ನು ಅವಗಣನೆ ಮಾಡಿರುವುದೇ ಕಾರಣ.

ಹಾಗಾದರೆ ಮಕ್ಕಳಲ್ಲಿ ಮೌಲ್ಯಗಳನ್ನು ಬೆಳೆಸುವಲ್ಲಿ ನಾವೆಲ್ಲಿ ಎಡವುತ್ತಿದ್ದೇವೆಂದು ಆತ್ಮಾವಲೋಕನ ಮಾಡಿಕೊಳ್ಳಬೇಕಾಗಿದೆ.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಎಲ್ಲರೂ ತಮ್ಮ ಮಕ್ಕಳು ಉತ್ತಮ ಶಿಕ್ಷಣ ಪಡೆದು, ಉತ್ತಮ ಉದ್ಯೋಗ ಪಡೆದು ಗೌರವದಿಂದ ಬದುಕಲಿ ಎಂದು ಆಶಿಸುತ್ತಾರೆ. ಅದು ತಪ್ಪಲ್ಲ.. ಆದರೆ ಶಿಕ್ಷಣದೊಂದಿಗೆ ಉತ್ತಮ ಮೌಲ್ಯ, ಸಂಸ್ಕಾರಗಳನ್ನು ಬೆಳೆಸಿಕೊಂಡಿದ್ದಾರೆಯೇ ಎನ್ನುವುದನ್ನು ಗಮನಿಸುತ್ತಿಲ್ಲ. ಕೇವಲ ಅಂಕ ಗಳಿಕೆಯ ಆಧಾರದ ಮೇಲೆ ಅವಲಂಬಿತವಾದ, ಉದ್ಯೋಗ ಸಂಪಾದನೆಯೊಂದೆ ಗುರಿಯಾಗಿಸಿಕೊಂಡು ಸಂಕುಚಿತ ದೃಷ್ಟಿಯಲ್ಲಿ ನೀಡಿದ ಶಿಕ್ಷಣ ಮೌಲ್ಯಗಳನ್ನು ಮರೆ ಮಾಡುತ್ತಿದೆ. ಕೇವಲ ಮಾಹಿತಿ ಆಧಾರಿತವಾಗಿ, ಯಾಂತ್ರಿಕವಾಗಿ, ಹಣ ಗಳಿಕೆಯನ್ನು ಮುಖ್ಯ ಗುರಿಯಾಗಿಟ್ಟುಕೊಂಡು ಶಿಕ್ಷಣ ನೀಡುತ್ತಿರುವ ಹೆಚ್ಚಿನ ಶಿಕ್ಷಣ ಸಂಸ್ಥೆಗಳಲ್ಲಿ ಶಿಕ್ಷಣವು ವ್ಯಾಪಾರೀಕರಣಗೊಂಡಿದೆ ಎನ್ನುವುದು ನಗ್ನ ಸತ್ಯ.

ಆಧುನಿಕ ಬದುಕಿನ ನಾಗಲೋಟದಲ್ಲಿ ಐಷಾರಾಮಿ ಜೀವನಕ್ಕಾಗಿ ಹಣ, ಆಸ್ತಿ, ಅಂತಸ್ತು, ಅಧಿಕಾರಗಳ ಹಿಂದೆ ಓಡುತ್ತಿರುವ ಯಾರಿಗಾದರೂ ಮೌಲ್ಯಗಳೆಂದರೆ ಕೇವಲ ಪುಸ್ತಕಗಳಿಗೆ ಸೀಮಿತ, ಹೇಳಲು–ಕೇಳಲಷ್ಟೇ ಚೆಂದ ಎನ್ನುವಂತಾಗಿದೆ. ಮೌಲ್ಯಗಳ ಕಡಗಣನೆ ಸಮಾಜವನ್ನು ಅಧೋಗತಿಗೆ ಕೊಂಡೊಯ್ಯುತ್ತಿದೆ. ಅದರಿಂದಾಗಿಯೇ




ಇಂದಿನ ಬದುಕು ಅಸಹನೀಯವಾಗುತ್ತಿದೆ. ಮೌಲ್ಯಗಳು ಕುಸಿಯುತ್ತಿವೆ.

ಇಂದಿನ ಟಿ.ವಿ ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಬಿತ್ತರವಾಗುತ್ತಿರುವ ಕೆಲವು ಕಾರ್ಯಕ್ರಮ ಹಾಗೂ ವಿಡಿಯೋಗಳು ಮಕ್ಕಳ ವ್ಯಕ್ತಿತ್ವ ಬೆಳವಣಿಗೆಗೆ ಪೂರಕವಾಗಿರದೇ ಮಾರಕವಾಗುತ್ತಿವೆ. ಅವರ ಮೇಲೆ ಕೆಟ್ಟ ಪ್ರಭಾವ ಬೀರುತ್ತಿವೆ.ಇದರಿಂದ ಮಕ್ಕಳು ಹಾದಿ ತಪ್ಪುತ್ತಿದ್ದಾರೆ.ಹಠಮಾರಿತನ,ಕೋಪ,ದ್ವೇಷ,ಅವಿಧೇಯತೆ,ಅಹಂಕಾರ, ಅಸಡ್ಡೆಯ ಪ್ರವೃತ್ತಿಗಳು ಹೆಚ್ಚಾಗಿ ಕಂಡು ಬರುತ್ತಿವೆ.

ಪ್ರೀತಿ, ಕ್ಷಮೆ, ದಯೆ, ಅನುಕಂಪ, ತಾಳ್ಮೆ, ಸತ್ಯ ಸಂಧತೆ, ಪ್ರಾಮಾಣಿಕತೆ,ನ್ಯಾಯಪರತೆ, ಉದಾರತೆ,ಸಹಿಷ್ಣುತೆ ಮಾನವೀಯತೆ, ಪರಿಸರ ಸಂರಕ್ಷಣೆ ಮೊದಲಾದ ಮೌಲ್ಯಗಳು ಅರ್ಥಪೂರ್ಣ ಬದುಕಿನ ಉತ್ಕೃಷ್ಟತೆಗೆ, ಶ್ರೇಷ್ಟತೆಗೆ ಅಗತ್ಯವಾದವುಗಳಾಗಿವೆ. ಅಂತಹ ಮೌಲ್ಯಗಳನ್ನು ನಮ್ಮ ಬಾಳಲ್ಲಿ ಹೊಂದದ ಹೊರೆತು ಆ ಬಾಳಿಗೆ ಅರ್ಥವಿಲ್ಲ. ಮೌಲ್ಯರಹಿತ ಬದುಕು, ಗೊತ್ತು ಗುರಿಯಿಲ್ಲದ ನಾವೆಯ ಪಯಣದಂತೆ ವಿವೇಚನಾರಹಿತವಾದುದು.

ಹಿಂದಿನ ದಶಕಗಳಲ್ಲಿ ಸಮಾಜದಲ್ಲಿದ್ದ ಅವಿಭಕ್ತ ಕುಟುಂಬಗಳಲ್ಲಿ ಪರಂಪರಾನುಗತವಾಗಿ ಮೌಲ್ಯಗಳು, ರೂಢಿ, ಸಂಪ್ರದಾಯಗಳು ಕಂಡು ಬರುತ್ತಿದ್ದವು. ಅಂತಹ ಕೂಡು ಕುಟುಂಬದಲ್ಲಿ ಬೆಳೆದ ಮಕ್ಕಳಲ್ಲಿ ಶಿಕ್ಷಣ ಕಡಿಮೆ ಇದ್ದರೂ, ಮೌಲ್ಯ, ಸಂಸ್ಕಾರಗಳಿಗೆ ಕೊರತೆ ಇರುತ್ತಿರಲಿಲ್ಲ.ಹಿರಿಯರಿಂದ ಕಿರಿಯರಿಗೆ ಸಂಸ್ಕಾರ, ಸಂಸ್ಕೃತಿ, ಮೌಲ್ಯಗಳ ಪರಿಚಯವಾಗುತ್ತಿತ್ತು. ಆಗಿನ ಶಿಕ್ಷಣ ವ್ಯವಸ್ಥೆ ಕೂಡ ಮೌಲ್ಯ ಪ್ರಧಾನವಾಗಿತ್ತು. ಕಾಲಕ್ರಮೇಣ ಅವಿಭಕ್ತ ಕುಟುಂಬಗಳು ಕಣ್ಮರೆಯಾಗಿ, ವಿಭಕ್ತ ಕುಟುಂಬಗಳ ಸಂಖ್ಯೆ ಹೆಚ್ಚಾದಂತೆಲ್ಲ ಮೌಲ್ಯಗಳ ಬೆಳವಣಿಗೆ ಕುಂಠಿತವಾಯಿತು. ಐಹಿಕ ಸುಖ ಭೋಗಗಳ ಲಾಲಸೆ ಹೆಚ್ಚುತ್ತಾ ಸಾಗಿ ಮೌಲ್ಯಗಳು ಕಣ್ಮರೆಯಾಗುತ್ತ ಬಂದವು. ಇಂದಿನ ಸಾಮಾಜಿಕ ವ್ಯವಸ್ಥೆಯಲ್ಲಿ ಅನ್ಯೆತಿಕತೆ, ಭ್ರಷ್ಟಾಚಾರ, ಮೌಲ್ಯಗಳ ಅಧಃಪತನ ಹೆಚ್ಚಾಗಲು ವಿದ್ಯಾವಂತರೇ ಹೆಚ್ಚು ಕಾರಣೀಭೂತರಾಗಿರುವುದು ದುರಂತ. ಇದನ್ನು ಕೊನೆಗಾಣಿಸಬೇಕಾದದ್ದು ನಮ್ಮೆಲ್ಲರ ಜವಾಬ್ದಾರಿ.




ಹಾಗಾಗಿ ನಮ್ಮ ಶಿಕ್ಷಣ ವ್ಯವಸ್ಥೆಯಲ್ಲಿ ಇಂದು ನೈತಿಕ ಶಿಕ್ಷಣ, ಮೌಲ್ಯ ಶಿಕ್ಷಣದ ಅಗತ್ಯ ಹೆಚ್ಚಾಗಿ ಕಂಡು ಬರುತ್ತಿದೆ. ಆ ನಿಟ್ಟಿನಲ್ಲಿ ನಮ್ಮ ಸರ್ಕಾರಗಳು ಪಠ್ಯವಸ್ತುವಿನಲ್ಲಿ ಮೌಲ್ಯಗಳ ಬೆಳವಣಿಗೆಗೆ ಪೂರಕವಾದ ಪಾಠಗಳನ್ನು ಪುನಃ ಸೇರಿಸಬೇಕಾದ ಅನಿವಾರ್ಯತೆ ಉಂಟಾಗಿದೆ ಮತ್ತು ಪಠ್ಯ ಪರಿಷ್ಕರಣೆಯ ಮೂಲಕ ಅದನ್ನು ಮಾಡಲಾಗುತ್ತಿದೆ ಎನ್ನುವುದು ಶ್ಲಾಘನೀಯ. ಪ್ರಸ್ತುತ ನಮ್ಮ ಶಿಕ್ಷಣ ವ್ಯವಸ್ಥೆಯು ಮಾಹಿತಿಗಿಂತ ಹೆಚ್ಚಾಗಿ ಮೌಲ್ಯಗಳಿಗೆ ಹೆಚ್ಚು ಒತ್ತು ಕೊಡಬೇಕಾಗಿದೆ, ಜ್ಞಾನ, ಕೌಶಲಾಧಾರಿತ ಮೌಲಿಕ ಶಿಕ್ಷಣ ಇಂದು ನಮ್ಮ ಮಕ್ಕಳಿಗೆ ಅಗತ್ಯವಾಗಿ ಬೇಕೇ ಹೊರೆತು ಕೇವಲ ಮಾಹಿತಿ ಆಧಾರಿತ ಶಿಕ್ಷಣವಲ್ಲ ಎನ್ನುವುದನ್ನು ನಾವು ಮನಗಾಣಬೇಕು.ಎಳವೆಯಿಂದಲೇ ಮಕ್ಕಳಲ್ಲಿ ಉತ್ತಮ ಮೌಲ್ಯಗಳನ್ನು ಬೆಳೆಸಲು ಪೋಷಕರು ಪ್ರಯತ್ನ ಮಾಡಬೇಕು, ಅದಕ್ಕೆ ಪೂರಕವಾಗಿ ಉತ್ತಮ ವಿಚಾರ, ಉತ್ತಮ ನಡವಳಿಕೆ, ಆಚರಣೆ ಹಾಗೂ ಮೌಲ್ಯಗಳ ಮಹತ್ವದ ಬಗ್ಗೆ ತಿಳಿಸಿಕೊಡುವ ಅಗತ್ಯವಿದೆ. ಮೌಲ್ಯಗಳನ್ನು ಎಂದಿಗೂ ಕಲಿಸಲು ಸಾಧ್ಯವಿಲ್ಲ ಅದನ್ನು ನಾವು ಅನುಸರಿಸಿಯೇ ಇತರರಿಗೆ ಕಲಿಯಲು ಪ್ರೇರೇಪಿಸಬೇಕು ಎನ್ನುವುದು ಖ್ಯಾತ ಶಿಕ್ಷಣ ತಜ್ಞ, ನಾಡೋಜ ಡಾ. ಗುರುರಾಜ ಕರ್ಜಗಿಯವರ ಅಭಿಪ್ರಾಯ.ಆದ್ದರಿಂದ ಮೌಲ್ಯಗಳನ್ನು ಮೊದಲು ನಾವು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳುವ ಪ್ರಾಮಾಣಿಕ ಪ್ರಯತ್ನ ಮಾಡಬೇಕಿದೆ.

ಅದರ ಮೂಲಕ ನಮ್ಮ ಮಕ್ಕಳಿಗೂ ಅವುಗಳನ್ನು ಬೆಳೆಸಿಕೊಳ್ಳಲು ಹಾಗೆ ನಿದರ್ಶನಗಳಾಗಿ ಬದುಕಿದ ಶ್ರೇಷ್ಟ ಪ್ರಾಮಾಣಿಕ ವ್ಯಕ್ತಿಗಳ ಬಗ್ಗೆ ತಿಳಿಸಬೇಕಾಗಿದೆ.

ನಮ್ಮ ದೇಶ ಕಂಡ ಶ್ರೇಷ್ಟ ಇಂಜಿನಿಯರ್ ಮೈಸೂರಿನ ದಿವಾನರಾಗಿದ್ದ ಸರ್ ಎಂ ವಿಶ್ವೇಶ್ವರಯ್ಯನವರು, ದಿವಾನರಾಗಿ ಅಧಿಕಾರ ಸ್ವೀಕರಿಸುವ ಪೂರ್ವದಲ್ಲಿ,ತಮ್ಮ ಸಂಬಂಧಿಕರಿಗೆ ಉದ್ಯೋಗ ನೀಡುವಂತೆ ಮಹಾರಾಜರಿಗೆ ಶಿಫಾರಸ್ಸು ಮಾಡಲು ತಮ್ಮನ್ನು ಒತ್ತಾಯಿಸದಿದ್ದರೆ ಮಾತ್ರ ದಿವಾನರಾಗಿ ಅಧಿಕಾರ ಸ್ವೀಕರಿಸುತ್ತೇನೆ ಎಂದು ತಮ್ಮ ತಾಯಿಯಿಂದ ಭಾಷೆ ತೆಗೆದುಕೊಂಡಿದ್ದರು. ಕಛೇರಿ ಕೆಲಸದ ಸಮಯದಲ್ಲಿ ಮಾತ್ರ ಸರ್ಕಾರಿ ಕಾರು, ಮೇಣದ ಬತ್ತಿ ಬಳಸಿ, ತಮ್ಮ ವೈಯಕ್ತಿಕ ಕೆಲಸಕ್ಕೆ ತಮ್ಮದೇ ಸಂಪಾದನೆಯಲ್ಲಿ ಕೊಂಡ ಮೇಣದ ಬತ್ತಿ ಬಳಸುತ್ತಿದ್ದರೆನ್ನುವುದು ಅವರ ಪ್ರಾಮಾಣಿಕತೆ, ನಿಸ್ಪೃಹತೆಗೆ ನಿದರ್ಶನ. ಕನ್ನಡ ಸಾಹಿತ್ಯದ ಭೀಷ್ಮ ಎಂದೇ ಖ್ಯಾತರಾದ ಲೇಖಕ, ಪತ್ರಕರ್ತರಾದ ಡಿ.ವಿ. ಗುಂಡಪ್ಪನವರು ತಮ್ಮ ಜೀವಿತ ಕಾಲದಲ್ಲಿ ಪಡೆದ ಸುಮಾರು 28 ಸಾವಿರ ರೂ ಮೊತ್ತದ ಚೆಕ್ ಗಳನ್ನು ಬ್ಯಾಂಕ್ ಗೆ ಸಲ್ಲಿಸಲೇ ಇಲ್ಲ. ತಮ್ಮ ಕೆಲಸಕ್ಕೆ ನೀಡಲಾದ ಆ ಸಂಭಾವನೆಗಳು ಅಗತ್ಯಕ್ಕಿಂತ, ತಮ್ಮ ಶ್ರಮಕ್ಕಿಂತ ಹೆಚ್ಚಿನದಾಗಿದ್ದವು ಎಂಬುದು ಅವರ ಭಾವನೆ. ಈ ದೇಶ ಕಂಡ ಶ್ರೇಷ್ಟ, ಪ್ರಾಮಾಣಿಕ ಪ್ರಧಾನಿಗಳಲ್ಲಿ ಒಬ್ಬರಾದ ಲಾಲ್ ಬಹಾದ್ದೂರ್ ಶಾಸ್ತ್ರೀಜಿ 50 ರೂ ಗಳ ವೇತನದ ಬದಲಾಗಿ 45 ರೂ ತಮ್ಮ ಕುಟುಂಬ ನಿರ್ವಹಣೆಗೆ ಸಾಕಾಗುತ್ತದೆ ಅಷ್ಟನ್ನು ಮಾತ್ರ ನೀಡಬೇಕೆಂದು ಪ್ರಧಾನಿ ಕಛೇರಿಗೆ ಪತ್ರ ಬರೆದಿದ್ದು,ಬರಗಾಲದ ಪರಿಸ್ಥಿತಿಯಲ್ಲಿ ದೇಶದ ಬಡವರಿಗೆ ಆಹಾರ ಒದಗಿಸಲು ಸೋಮವಾರದ ಉಪವಾಸಕ್ಕೆ ಕರೆ ಕೊಟ್ಟು ತಾವು ಅದನ್ನು ಪಾಲಿಸಿದ್ದು ಇತಿಹಾಸ.. ಹಾಗೆಯೇ ನಮ್ಮ ರಾಜ್ಯದ ಮುಖ್ಯಮಂತ್ರಿಗಳಾಗಿ ಆಡಳಿತ ನಡೆಸಿದ ಎಸ್. ನಿಜಲಿಂಗಪ್ಪನವರಿಗೆ ಸ್ವಂತ ಮನೆಯೇ ಇರಲಿಲ್ಲ ಎನ್ನುವುದನ್ನು ಕೇಳಿದಾಗ ನಿಜಕ್ಕೂ ಇಂತಹ ವ್ಯಕ್ತಿಗಳು ಇದ್ದರೇ ಎಂದು ಆಶ್ಚರ್ಯವಾಗುತ್ತದೆ. ಹೀಗೆ ನಮ್ಮ ಬದುಕಿನಲ್ಲಿ, ನಮ್ಮ ಮಕ್ಕಳ ಬದುಕಿನಲ್ಲಿ ಮೌಲ್ಯಗಳನ್ನು ಅಳವಡಿಸಿಕೊಳ್ಳಲು ಕಿಂಚಿತ್ ಆದರೂ ನಾವು ಪ್ರಯತ್ನಿಸೋಣ. ಅಂತಹ ಮೌಲ್ಯಯುತವಾದ ಬದುಕನ್ನು ಬಾಳಿ ಹೋದ ಹಿಂದಿನ ಎಲ್ಲ ಮಹಾನ್ ಚೇತನಗಳು ಈ ದಿಸೆಯಲ್ಲಿ ನಮಗೆ ದಾರಿ ದೀಪಗಳಾಗಲಿ.

Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA, PRGI No:KARKAN/2023/88055

# ಬಂಗಾರದ ಮನುಷ್ಯ-ಬಡವರ ಬಂಧು ಡಾ.ರಾಜ್‌ಗೆ ಅಭಿಮಾನಿ ದೇವರುಗಳಿಂದ ನಮನ

## ಬಳ್ಳಾರಿ, ಕೊಪ್ಪಳ, ರಾಯಚೂರು ಜಿಲ್ಲೆಗಳಲ್ಲಿ ಕನ್ನಡದ ಕುವರ ಡಾ.ರಾಜಕುಮಾರ ಜನ್ಮ ದಿನಾಚರಣೆ







■ **ಹಂಪಿ ಟೈಮ್ಸ್ ಬಳ್ಳಾರಿ**

ಡಾ.ರಾಜ್‌ಕುಮಾರ್ ಜನ್ಮದಿನಾಚರಣೆಯ ಅಂಗವಾಗಿ ಗುರುವಾರ ಡಾ.ರಾಜ್‌ಕುಮಾರ್ ಉದ್ಯಾನವನದಲ್ಲಿನ ಡಾ.ರಾಜ್ ಕುಮಾರ್ ಅವರ ಪುತ್ಥಳಿಗೆ ಅಧಿಕಾರಿ ವೃಂದದವರು, ವಿವಿಧ ಕನ್ನಡ ಪರ ಸಂಘಟನೆಗಳ ಪದಾಧಿಕಾರಿಗಳು ಮಾಲಾರ್ಪಣೆ ಮಾಡಿ ಪುಷ್ಪನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಮಾತನಾಡಿ, ಕನ್ನಡ ನಾಡು-ನುಡಿ, ಭಾಷಾಭಿಮಾನ ರಾಷ್ಟ್ರ ಮಟ್ಟದಲ್ಲಿ ಬೆಳೆಸಲು ತಮ್ಮದೇ ಆದ ನಟನ ಶೈಲಿಯಲ್ಲಿ ಬೆಳ್ಳಿ ಪರದೆ ಮೇಲೆ ಒಲವು ಮೂಡಿಸಿದ ವರನಟ ಡಾ.ರಾಜ್ ಕುಮಾರ್ ಅವರ ಕೊಡುಗೆ ಅಪಾರ ಎಂದು ಹೇಳಿದರು.

ಡಾ.ರಾಜ್ ಕುಮಾರ್ ಅವರ ಎಲ್ಲಾ ಸಿನಿ ಚಿತ್ರಗಳು ಜೀವನದ ಎಲ್ಲಾ ಆಯಾಮಗಳನ್ನು ಪ್ರಸ್ತುತಪಡಿಸುತ್ತಿದ್ದವು. ಬಾಲ್ಯದಲ್ಲಿ ನಾವೆಲ್ಲರೂ ಅವರ ಚಿತ್ರಗಳನ್ನೇ ನೋಡಿಕೊಂಡು ಬೆಳೆದಿದ್ದೇವೆ ಎಂದು ತಿಳಿಸಿದ ಅವರು, ಇದೇ ಸಂದರ್ಭದಲ್ಲಿ ಡಾ.ರಾಜ್ ಕುಮಾರ್ ಜನ್ಮದಿನದ ಶುಭಾಶಯ ತಿಳಿಸಿದರು.

ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷ ಸಿರಿಗೇರಿ ಪನ್ನರಾಜ್ ಅವರು ಮಾತನಾಡಿ, ಡಾ.ರಾಜ್ ಕುಮಾರ್ ಅವರ ಜನ್ಮದಿನಾಚರಣೆಯನ್ನು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಆಚರಿಸುವಂತೆ ಆದೇಶಿಸಿದ ರಾಜ್ಯ ಸರ್ಕಾರಕ್ಕೆ ಅಭಿನಂದನೆ ತಿಳಿಸಿದರು.

ಈ ಸಂದರ್ಭದಲ್ಲಿ ಸಹಾಯಕ ಆಯುಕ್ತ ಪಿ.ಪ್ರಮೋದ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾ ಸಹಾಯಕ ವಿ.ಸಿ.ಗುರುರಾಜ, ಕರ್ನಾಟಕ ಯುವ ಸಂಘದ ಅಧ್ಯಕ್ಷ ಬಿ.ಬಸವರಾಜ, ಕರ್ನಾಟಕ ಜನಸೈನ್ಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಕೆ.ಎರ್ರಿಸ್ವಾಮಿ, ಸ್ವಾಮಿ ವಿವೇಕಾನಂದ ಯುವಕ ಸಂಘದ ಅಧ್ಯಕ್ಷ ಪಿ.ಗಾದೆಪ್ಪ, ಮುಖಂಡರಾದ ಚಂದ್ರಶೇಖರ್ ಅಚಾರ್, ರಸೂಲ್ ಸಾಬ್ ಸೇರಿದಂತೆ ವಿವಿಧ ಕನ್ನಡ ಪರ ಸಂಘಟನೆಗಳ ಪದಾಧಿಕಾರಿಗಳು, ಡಾ.ರಾಜ್ ಕುಮಾರ್ ಅಭಿಮಾನಿಗಳು, ಸಾರ್ವಜನಿಕರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಸರ್ವ ಪಾತ್ರಗಳಿಗೂ ಜೀವ ತುಂಬಿದ ನಟ

■ **ಹಂಪಿ ಟೈಮ್ಸ್ ರಾಯಚೂರು**

ರಾಯಚೂರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್‌ನ ಕನ್ನಡ ಭವನದ ಆವರಣದಲ್ಲಿ ಗುರುವಾರ ಹಬ್ಬದ ಸಂಭ್ರಮ ಕಂಡು ಬಂದಿತು. ಡಾ.ರಾಜಕುಮಾರ ಅಭಿಮಾನಿಗಳು ಮತ್ತು ಗಾಯಕರೆಲ್ಲರೂ ಒಗ್ಗೂಡಿ ಡಾ.ರಾಜಕುಮಾರ ಅವರು ಹಾಡಿದ ಹಲವಾರು ಗೀತೆಗಳಿಗೆ ತಮ್ಮ ಧ್ವನಿಯನ್ನು ಸೇರಿಸಿ ಡಾ.ರಾಜ್ ಅವರ ಸುಮಧುರ ಕಂಠದ ಹಾಡುಗಳ ಹೊಳೆಯನ್ನೇ ಹರಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಸಾಹಿತ್ಯ ಪರಿಷತ್ ಮತ್ತು ಅಖಿಲ ಕರ್ನಾಟಕ ಡಾ.ರಾಜಕುಮಾರ ಅಭಿಮಾನಗಳ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಕನ್ನಡದ ಮೇರು ನಟ ಡಾ.ರಾಜಕುಮಾರ ಅವರ ಜನ್ಮದಿನಾಚರಣೆ ಕಾರ್ಯಕ್ರಮವು ಏಪ್ರೀಲ್ 24ರಂದು ಅರ್ಥಪೂರ್ಣವಾಗಿ ನಡೆಯಿತು.

ಅತಿಥಿಗಳು, ಗಣ್ಯರು ಮತ್ತು ಅವರ ಅಭಿಮಾನಿಗಳು ಮೊದಲಿಗೆ ಡಾ.ರಾಜಕುಮಾರ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಬಳಿಕ ತಹಸೀಲ್ದಾರರಾದ ಸುರೇಶ ವರ್ಮಾ ಅವರು ಸಸಿಗೆ ನೀರೆರೆಯುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ತಹಸೀಲ್ದಾರ ವರ್ಮಾ ಅವರು, ಡಾ.ರಾಜಕುಮಾರ ಬರೀ ನಟರಾಗಿರದೇ ಕನ್ನಡದ ಬಗ್ಗೆ ಅಪಾರ ಅಭಿಮಾನ ಹೊಂದಿದ್ದರು. ಕನ್ನಡವನ್ನು ಉಸಿರಾಗಿಸಿಕೊಂಡು ಕನ್ನಡದ ಉಳಿವಿನ ಹೋರಾಟದಲ್ಲಿ ಭಾಗಿಯಾದರು ಎಂದು ಹೇಳಿದರು.

ರಾಜ್ಯಮಟ್ಟದ ಡಾ.ರಾಜಕುಮಾರ ಸದ್ಭಾವನಾ ಪ್ರಶಸ್ತಿ ಪಡೆದ ಡಾ.ದಂಡಪ್ಪ ಬಿರಾದಾರ ಅವರು ಮಾತನಾಡಿ, ಪೌರಾಣಿಕ, ಸಾಮಾಜಿಕ, ಐತಿಹಾಸಿಕ ಸೇರಿದಂತೆ ಎಲ್ಲ ಬಗೆಯ ಪಾತ್ರಗಳಿಗೆ ಜೀವ ತುಂಬಿ ನಟಿಸಿ ಡಾ.ರಾಜಕುಮಾರ ಅವರು ಜನಮಾನಸದ ನಟರಾಗಿ ಹೊರಹೊಮ್ಮಿದರು ಎಂದರು.

ಅಖಿಲ ಕರ್ನಾಟಕ ಡಾ.ರಾಜಕುಮಾರ ಅಭಿಮಾನಿಗಳ ಸಂಘದ ಗೌರವ ಕಾರ್ಯದರ್ಶಿಗಳಾದ ಜೆ.ಎಲ್.ಗೋಪಿ ಅವರು ಮಾತನಾಡಿ, ಡಾ.ರಾಜಕುಮಾರ ಅವರು ಈ ನಾಡು ಕಂಡ ಶ್ರೇಷ್ಠ ನಟರಾಗಿದ್ದಾರೆ. ನಾಡು ನುಡಿಯ ಬಗ್ಗೆ ಡಾ.ರಾಜಕುಮಾರ ಅವರಿಗಿದ್ದ ಬದ್ಧತೆ ಶ್ರದ್ಧೆ ನಮಗೆ ಸದಾಕಾಲ ಆದರ್ಶಪ್ರಾಯವಾಗಿದೆ ಎಂದರು.

ವಾರ್ತಾ ಇಲಾಖೆಯ ಗವಿಸಿದ್ದಪ್ಪ ಹೊಸಮನಿ ಅವರು ಪ್ರಾಸ್ತಾವಿಕ ಮಾತನಾಡಿ, ಡಾ. ರಾಜಕುಮಾರ ಅಂದರೆ ಒಂದು ಬೆರಗು. ಅವರು ಕನ್ನಡದ ಸಾಕ್ಷಿಪ್ರಜ್ಞೆಯಾಗಿದ್ದಾರೆ. ದೇಶ ಕಾಲ ಮೀರಿ ಡಾ.ರಾಜಕುಮಾರ ಅವರ ಅಭಿಮಾನಿಗಳಿದ್ದಾರೆ. ಕನ್ನಡ ಬಗ್ಗೆ ಅಪಾರ ಅಭಿಮಾನ, ವಿಶಿಷ್ಟವಾದ ನಟನೆ ಎಂದಾಗ ನಮಗೆ ಡಾ.ರಾಜಕುಮಾರ ಸದಾಕಾಲ ನೆನಪಾಗುತ್ತಾರೆ ಎಂದರು.

**ಡಾ.ರಾಜಕುಮಾರ ಗೀತೆಗಳ ಗಾಯನ:** ಉದ್ಘಾಟನಾ ಸಮಾರಂಭದ ಬಳಿಕ ಡಾ.ರಾಜಕುಮಾರ ಹಾಡುಗಳ ಗೀತ ಗಾಯನ ಕಾರ್ಯಕ್ರಮ ನಡೆಯಿತು. ರಾಯಚೂರಿನ ಹಿರಿಯ ಕಲಾವಿದರಾದ ನರೇಂದ್ರಕುಮಾರ, ನಿವೃತ್ತ ಎಲ್‌ಐಸಿ ಅಧಿಕಾರಿಯಾದ ಗುರುರಾಜ್, ಆರೋಗ್ಯ ಇಲಾಖೆಯ ನಾಗರಾಜ ಜಗತಾಪ, ದೂರದರ್ಶನ ಕಲಾವಿದರಾದ ನಬಿಸಾಬ ಬೇಗ್, ಬಸನಗೌಡ ಹೊಕ್ರಾಣಿ, ನಿವೃತ್ತ ಎಲ್‌ಐಸಿ ನೌಕರರಾದ ಹುಲಿಗೆಪ್ಪ ಜಕ್ಕಲಿ, ಕವಿ ತಿಮ್ಮಯ್ಯ, ಯುವ ಗಾಯಕರಾದ ಕೃಷಿ ವಿಶ್ವ ವಿದ್ಯಾಲಯದ ನರಸಿಂಹಲು, ವಿರುಪಾಕ್ಷಿ, ಚಂದ್ರಶೇಖರ, ಸಂಗೀತಾ ವೀರಾಪುರ, ವಾರ್ತಾ ಇಲಾಖೆಯ ಗವಿಸಿದ್ದಪ್ಪ ಹೊಸಮನಿ ಅವರು ಡಾ.ರಾಜಕುಮಾರ ಗೀತೆಗಳನ್ನು ಹೇಳಿ ರಂಜಿಸಿದರು. ಹೆಸರಾಂತ ಕಲಾವಿದರಾದ ಜ್ಯೂನಿಯರ್ ಡಾ.ರಾಜಕುಮಾರ ಎಂದೇ ಹೆಸರಾದ ಗುರು ದೇವರಮನಿ ಅವರು ಡಾ.ರಾಜಕುಮಾರ ಅವರ ಹಾಡುಗಳನ್ನು ಮತ್ತು ಡಾ.ರಾಜಕುಮಾರ ಅವರ ಸಂಭಾಷಣೆಗಳನ್ನು ಹೇಳಿ ಚಪ್ಪಾಳಿ ಗಿಟ್ಟಿಸಿದರು. ಅಭಿಮಾನಿಗಳು ಭಾಗವಹಿಸಿದ್ದರು.

# ಕನ್ನಡ ಭಾಷಾಭಿಮಾನ ಬೆಳೆಸಿದ ಡಾ.ರಾಜ್

■ **ಹಂಪಿ ಟೈಮ್ಸ್ ಕೊಪ್ಪಳ**

ಡಾ. ರಾಜ್‌ಕುಮಾರ್ ರವರು ಕೇವಲ ಕಲಾವಿಧರಾಗಿ ಹಾಗೂ ಕನ್ನಡ ಕಲಾ ಅರಾಧಕರಾಗಿ ಉಳಿಯದೇ ಅವರು ಕನ್ನಡ ಭಾಷಾಭಿಮಾನವನ್ನು ಬೆಳೆಸಿದ್ದರು ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿ ಸದಸ್ಯರಾದ ಸಾವಿತ್ರಿ ಮುಜುಮದಾರ ಹೇಳಿದರು.

ಅವರು ಗುರುವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕೊಪ್ಪಳ ಇವರ ಸಹಯೋಗದಲ್ಲಿ ಏರ್ಪಡಿಸಲಾಗಿದ್ದ ಕನ್ನಡ ಚಲಚಿತ್ರ ರಂಗ ಕಂಡ ಮೇರು ನಟ, ನಟ ಸಾರ್ವಭೌಮ, ಕರ್ನಾಟಕ ರತ್ನ, ಪದ್ಮಭೂಷಣ ಡಾ. ರಾಜ್‌ಕುಮಾರ್ ರವರ 97ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಡಾ. ರಾಜ್‌ಕುಮಾರ್ ರವರು ಎಲ್ಲರಿಗೂ ಆದರ್ಶ ವ್ಯಕ್ತಿಗಳಾಗಿದ್ದರು. ಆಗಿನ ಕಾಲದಲ್ಲಿ ತುಂಬಾ ಜನ ರಾಜ್‌ಕುಮಾರ್‌ರವರ ಜೀವನವನ್ನು ಆದರ್ಶವಾಗಿಟ್ಟು ಕೊಂಡು ಬದಲಾಗಿದ್ದಾರೆ. ಕರ್ನಾಟಕ ರಾಜ್ಯ ಹಾಗೂ ಭಾರತ ಮಾತ್ರವಲ್ಲದೇ ಜಾಗತಿಕ ಮಟ್ಟದಲ್ಲಿ ಅರಣ್ಯಕ್ಕೆ ಸಂಬಂಧಿಸಿ ಮೊಟ್ಟ ಮೊದಲ ಚಲನಚಿತ್ರ ಮಾಡಿದವರೇ ಡಾ. ರಾಜ್‌ಕುಮಾರ್. ಅವರು ಕೇವಲ ನಟರಾಗದೇ ಗೋಕಾಕ್ ಚಳುವಳಿ ಮೂಲಕ ಇಡಿ ಕನ್ನಡ ಚಿತ್ರರಂಗ ಹಾಗೂ ಎಲ್ಲಾ ಸಾಹಿತಿಗಳ ಜೊತೆಗೆ ಕರ್ನಾಟಕ ರಾಜ್ಯವನ್ನು ಸುತ್ತಿ ಕನ್ನಡ ಭಾಷಾಭಿಮಾನ ಬೆಳೆಸಿದ್ದರು. ನಮ್ಮ ಅನ್ನದ ಭಾಷೆ ಯಾಕೆ ಬೇಕು, ನಮ್ಮ ಜೀವನದಲ್ಲಿ ಈ ಭಾಷೆಯ ಮಹತ್ವ ಏನು ಎಂಬುವುದನ್ನು ತೋರಿಸಿಕೊಟ್ಟಿದ್ದರು.

ಬೇರೆ ರಾಜ್ಯದ ದೊಡ್ಡ-ದೊಡ್ಡ ನಟರೆಲ್ಲಾ ರಾಜಕಾರಣಕ್ಕೆ ಹೋಗಿದ್ದಾರೆ. ಡಾ. ರಾಜ್‌ಕುಮಾರ್ ರವರು ಮನಸ್ಸು ಮಾಡಿದರೆ, ಅವರು ರಾಜಕಾರಣಿಯಾಗಿ ಇಡಿ ಕರ್ನಾಟಕವನ್ನು ಆಳಬಹುದಾಗಿತ್ತು. ಆದರೆ, ಅವರು ಕೇವಲ ಕಲಾವಿಧರಾಗಿ, ಕನ್ನಡ ಕಲಾ ಅರಾಧಕರಾಗಿ ಪ್ರತಿಯೊಬ್ಬ ಕನ್ನಡಿಗರ ಮನದಲ್ಲಿ ಉಳಿದಿದ್ದಾರೆ. ಬೇರೆ ಭಾಷೆಗಳಲ್ಲಿ ಅವಕಾಶಗಳು ಸಿಕ್ಕರು ಸಹ ಕನ್ನಡ ಭಾಷೆಯನ್ನು ಬಿಟ್ಟು ಬರುವುದಿಲ್ಲ ಎಂದು ಹೇಳಿದ್ದರು. ಅವರ ಕಲೆ ಕನ್ನಡ ಭಾಷೆಗೆ ಮಾತ್ರ ಸಿಮಿತವಾಗಿತ್ತು. ರಾಜ್‌ಕುಮಾರ್ ರವರು ಕನ್ನಡದ ಆಸ್ತಿ, ಶಕ್ತಿ, ಕನ್ನಡದ ಅಸ್ಮಿತೆಯಾಗಿದ್ದಾರೆ. ಅವರ ಕುಟುಂಬದವರು ಚಿತ್ರರಂಗಕ್ಕೆ ಅಷ್ಟೆ ಅಲ್ಲದೇ ಸಾಮಾಜಿಕವಾಗಿಯೂ ಸಹ ಬಹಳ ದೊಡ್ಡ ಕೊಡುಗೆಯನ್ನು ನೀಡಿದ್ದಾರೆ ಎಂದು ಹೇಳಿದರು.

ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚರ್ಯರಾದ ಕೃಷ್ಣಮೂರ್ತಿ ದೇಸಾಯಿ ಅವರು ಮಾತನಾಡಿ, ಡಾ. ರಾಜ್‌ಕುಮಾರ್ ರವರು ಕನ್ನಡ ಚಲನ ಚಿತ್ರರಂಗದಲ್ಲಿ ಅತ್ಯಂತ ಪ್ರಭಾವಿ ನಟರಾಗಿ ಸುಮಾರು ಐದು ದಶಕಗಳ ಕಾಲ ಚಿತ್ರರಂಗದಲ್ಲಿ ತಮ್ಮದೆ ಆದ ಚಾಪನ್ನು ಮೂಡಿಸಿದ್ದರು. ನಾಟಕ ಕಂಪನಿಗಳಿಂದ ಹಿಡಿದು ಸಿನಿಮಾ ಕಂಪನಿಗಳವರೆಗೆಗೂ ತಮ್ಮ ಪ್ರತಿಭೆಯನ್ನು ತೋರಿಸಿ, ಇತರರಿಗೆ ಮಾರ್ಗದರ್ಶಕರಾಗಿದ್ದರು. ದಾರಿ ತಪ್ಪಿದ ಮಗ, ಬಡವರ ಬಂಧು, ಕವಿರತ್ನ ಕಾಳಿದಾಸ, ಭಕ್ತ ಕುಂಬಾರ, ಹೀಗೆ ಹಲವಾರು ಚಿತ್ರಗಳಲ್ಲಿ ನಟಿಸುವ ಮೂಲಕ ಕನ್ನಡಿಗರ ಮನದಲ್ಲಿ ಅಜರಾಮರವಾಗಿದ್ದಾರೆ. ಚಲನ ಚಿತ್ರಗಳಲ್ಲಿನ ಅವರ ನಟನೆ, ಸಂಭಾಷಣೆ, ಸಂಗೀತ, ಸ್ವರ ಸಂಯೋಜನೆ ಅರ್ಥಗರ್ಭಿತವಾಗಿದ್ದವು. ಡಾ. ರಾಜ್‌ಕುಮಾರ್ ರವರು ಕನ್ನಡ ಚಿತ್ರರಂಗಕ್ಕೆ ವಿಶೇಷವಾದ ಸ್ಥಾನ-ಮಾನ ತಂದು ಕೊಟ್ಟವರಾಗಿದ್ದಾರೆ ಎಂದರು.

ಪುಷ್ಪನಮನ ಸಲ್ಲಿಕೆ ಹಾಗೂ ಸಂಗೀತ: ಡಾ. ರಾಜ್‌ಕುಮಾರ್ 97ನೇ ಜನ್ಮದಿನಾಚರಣೆ ನಿಮಿತ್ತ ಕೊಪ್ಪಳ ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ ಅವರು ರಾಜ್‌ಕುಮಾರ್ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಗೌರವ ಸಮರ್ಪಿಸಿದರು. ಕಲಾವಿದ ಬಾಷು ಹಿರೇಮನಿ ಕಿನ್ನಾಳ ಹಾಗೂ ಚಂದನ ಭದ್ರಾವತಿ ಅವರು ರಾಜ್‌ಕುಮಾರ್ ರವರ ಅಭಿನಯದ ಚಲನಚಿತ್ರಗಳ ಗೀತೆಗಳನ್ನು ಹಾಡಿದರು.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ರೇಷ್ಮಾ ಹಾನಗಲ್, ಆಹಾರ ಇಲಾಖೆ ಉಪನಿರ್ದೇಶಕ ಸೋಮಶೇಖರ ಬಿರಾದಾರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ನಾಗಮಣಿ, ಚುನಾವಣಾ ವಿಭಾಗದ ತಹಶೀಲ್ದಾರ ರವಿ ವಸ್ತ್ರದ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಡಾ. ಸುರೇಶ್ ಜಿ., ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ್ ಮರಬನಳ್ಳಿ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಡಿ.ನಾಗರಾಜ ಸೇರಿದಂತೆ ವಾರ್ತಾ ಇಲಾಖೆ, ಜಿಲ್ಲಾಧಿಕಾರಿ ಕಛೇರಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

## ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಸಾಲಸೌಲಭ್ಯಕ್ಕೆ ಅರ್ಜಿ ಅಹ್ವಾನ

■ **ಹಂಪಿ ಟೈಮ್ಸ್ ಹೊಸಪೇಟೆ**

2025-26ನೇ ಸಾಲಿನಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಅರಿವು ಯೋಜನೆಯಡಿ ಸಾಲ ಸೌಲಭ್ಯ ಪಡೆಯಲು ಅಲ್ಪಸಂಖ್ಯಾತರ (ಮುಸ್ಲಿಂ, ಕ್ರಿಶ್ಚಿಯನ್, ಜೈನರು, ಭೌದ್ದರು, ಸಿಖ್ಖರು, ಪಾರ್ಸಿಗಳು) ನಿಗದಿತ ನಮೂನೆಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ (ಸಿಇಟಿ/ನೀಟ್)ನಲ್ಲಿ ಆಯ್ಕೆಯಾಗುವ ವೈದ್ಯಕೀಯ ಎಂಬಿಬಿಎಸ್ ಹಾಗೂ ದಂತ ವೈದ್ಯಕೀಯ(ಬಿಡಿಎಸ್) ಹಾಗೂ ಬಿಇ, ಬಿಟೆಕ್, ಬ್ಯಾಚುಲರ್ ಆಫ್ ಆರ್ಕಿಟೇಕ್ಚರ್, ಬಿ.ಆಯುಷ್, ಫಾರ್ಮಸಿ, ಕೃಷಿ ವಿಜ್ಞಾನ ಮತ್ತು ಪಶು ವೈದ್ಯಕೀಯ ಇಂತಹ ಕೋರ್ಸ್ ಗಳಿಗೆ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ನಿಗಮದ ವೆಬ್‌ಸೈಟ್ ಞಣಣಠಿ://ಞಟಜಥಿಂಟಿಟಿಟುಟಿಜ. ಞಚಿಡಿಟಿಚಿಣಚಿಞಚಿ.ರಂತ.ಎಟಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಆರಂಭ ಇದೇ ಏ.23 ರಿಂದ ಮೇ.23 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ(ನಿ), ಮೌಲಾನ ಆಜಾದ್ ಭವನ, 1ನೇ ಮಹಡಿ, ಮುಸ್ಲಿಂ ಶಾದಿ ಮಹಲ್ ಪಕ್ಕದಲ್ಲಿ, ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರ, ಬಳ್ಳಾರಿ. ದೂ.08392-294370. ಇವರನ್ನು ಸಂಪರ್ಕಿಸಲು ಕರ್ನಾಟಕ ಅಲ್ಪಸಂಖ್ಯಾತರ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನಿಷ್ಠ ಬೆಂಬಲ ಯೋಜನೆಯಡಿ ಜೋಳ ಖರೀದಿ

■ **ಹಂಪಿ ಟೈಮ್ಸ್ ಬಳ್ಳಾರಿ**

2024-25 ನೇ ಸಾಲಿನ ಹಿಂಗಾರು ಋತುವಿನಲ್ಲಿ ಬೆಳೆದ ಜೋಳವನ್ನು ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ನೇರವಾಗಿ ಖರೀದಿಸಲಾಗುವುದು ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಸಕೀನ ಅವರು ತಿಳಿಸಿದ್ದಾರೆ.

ಈ ಕುರಿತು ಬಳ್ಳಾರಿ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ತೀರ್ಮಾನಿಸಿದ್ದು, 2024-25 ನೇ ಸಾಲಿನ ಬೆಂಬಲ ಬೆಲೆ ಯೋಜನೆ ಕಾರ್ಯಾಚರಣೆಯನ್ನು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ ನಿಯಮಿತ, ಬಳ್ಳಾರಿ ನಿರ್ವಹಿಸಲಿದೆ.

ಸರ್ಕಾರದ ಆದೇಶದಂತೆ ಬೆಂಬಲ ಬೆಲೆ ಯೋಜನೆಯಡಿ ಜೋಳವನ್ನು ಮಾರಾಟ ಮಾಡಲು ರೈತರು ಮೊದಲು ಕೃಷಿ ಇಲಾಖೆಯಲ್ಲಿ ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿ ಮಾಡಿಕೊಳ್ಳಬೇಕು. ನಂತರ ಆಯಾ ತಾಲ್ಲೂಕುಗಳ ಕೃಷಿ ಉತ್ಪನ್ನ ಮಾರುಕಟ್ಟೆ, ತಾಲೂಕು ಕೃಷಿ ಉತ್ಪನ್ನ ಸಹಕಾರ ಮಾರಾಟ ಸಂಘ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ತಾಲೂಕು ಕೇಂದ್ರ ಕಚೇರಿಗಳಲ್ಲಿ ತೆರೆಯಲಾಗುವ ಖರೀದಿ ಕೇಂದ್ರಗಳಲ್ಲಿ ಜೋಳ ಮಾರಾಟ ಮಾಡಲು ನೋಂದಾಯಿಸಿಕೊಳ್ಳಬೇಕು ಎಂದು ಅವರು ತಿಳಿಸಿದ್ದಾರೆ.

**ಸರ್ಕಾರ ಘೋಷಿಸಿರುವ ಬೆಂಬಲ ಬೆಲೆ:**

ಬಿಳಿಜೋಳ-ಹೈಬ್ರಿಡ್: ರೂ.3,371 ಮತ್ತು ಬಿಳಿಜೋಳ-ಮಾಲ್ದಂಡಿ: ರೂ.3,421.

**ನೋಂದಣಿ ಮತ್ತು ಖರೀದಿ ಅವಧಿ:**

ನೋಂದಣಿ ಈಗಾಗಲೇ ಪ್ರಾರಂಭಗೊಂಡಿದ್ದು, ಮೇ 31 ರ ವರೆಗೆ ಖರೀದಿಸಲಾಗುವುದು.

**ಖರೀದಿ ಕೇಂದ್ರಗಳ ವಿವರ:**

ಬಳ್ಳಾರಿ ತಾಲ್ಲೂಕಿನ ಎಪಿಎಂಸಿ ಆವರಣ ಮತ್ತು ರೂಪನಗುಡಿ. ಸಿರುಗುಪ್ಪ ತಾಲ್ಲೂಕಿನ ಸಿರುಗುಪ್ಪ ಪಟ್ಟಣ, ಕರೂರು, ತಾಳೂರು ಮತ್ತು ಹಚ್ಚೊಳ್ಳಿ. ಕಂಪ್ಲಿ ತಾಲ್ಲೂಕಿನ ಕಂಪ್ಲಿ ಪಟ್ಟಣ, ಎಮ್ಮಿಗನೂರು. ಕುರುಗೋಡು ಮತ್ತು ಸಂಡೂರು.

**ರೈತರ ನೋಂದಣಿ:**

ರೈತರ ನೋಂದಣಿಯನ್ನು ತಾಲೂಕು ಮಟ್ಟದ / ಹೋಬಳಿ ಮಟ್ಟದಲ್ಲಿ ಖರೀದಿ ಕೇಂದ್ರಗಳಲ್ಲಿ ಆನ್‌ಲೈನ್ ಮುಖಾಂತರ ಮಾಡಲಾಗುವುದು. ಖರೀದಿ ಕೇಂದ್ರಕ್ಕೆ ರೈತರು ಕೃಷಿ ಇಲಾಖೆಯಿಂದ ಪಡೆದಿರುವ ಅವರ ಫ್ರೂಟ್ಸ್ ಐ.ಡಿ (ರೈತರ ನೊಂದಣಿ ಮತ್ತು ಏಕೀಕೃತ ಫಲಾನುಭವಿ ಮಾಹಿತಿ ವ್ಯವಸ್ಥೆ) ಮತ್ತು ಆಧಾರ್‌ನೊಂದಿಗೆ ನೋಂದಣಿ ಕೇಂದ್ರಕ್ಕೆ ಬರಬೇಕು.

ಬೆಂಬಲ ಬೆಲೆಗಾಗಿ ರೈತರನ್ನು ಪ್ರತ್ಯೇಕವಾಗಿ ನೊಂದಾಯಿಸದೆ ಕೇವಲ ಅವರ ಫ್ರೂಟ್ಸ್ ಐ.ಡಿ.ಯ ಮೂಲಕ ಖರೀದಿಗೆ ನೋಂದಾಯಿಸಲಾಗುವುದು. ರೈತರ ಫ್ರೂಟ್ಸ್ ಐ.ಡಿಯನ್ನು ರೈತರಿಂದಲೇ ಪ್ರಸ್ತುತ ಸಾಲಿನ ಫ್ರೂಟ್ಸ್ ಐ.ಡಿ ಪಡೆಯುವುದು ಕಡ್ಡಾಯ. ರೈತರ ಬಳಿ ಫ್ರೂಟ್ಸ್ ಐ.ಡಿ ಇಲ್ಲದಿದ್ದಲ್ಲಿ ಅಥವಾ ಅವರ ಫ್ರೂಟ್ಸ್ ಐ.ಡಿ ಮಾಹಿತಿ ಪರಿಷ್ಕರಿಸಲು ಕೃಷಿ ಇಲಾಖೆಯನ್ನು ಸಂಪರ್ಕಿಸಿ ಸರಿಪಡಿಸಿಕೊಳ್ಳಬೇಕು.

ಪ್ರತಿಯೊಬ್ಬ ರೈತರ ಫ್ರೂಟ್ಸ್ ಐ.ಡಿ ನಮೂದಿಸಿದ ನಂತರ ಫ್ರೂಟ್ಸ್ ದತ್ತಾಂಶದಿಂದ ರೈತರ ಅಗತ್ಯ ಮಾಹಿತಿ ಲಭ್ಯವಾಗಲಿದೆ. ಮಾಹಿತಿಯಲ್ಲಿ ರೈತರ ಹೆಸರು, ವಿಳಾಸ, ಜಾತಿ, ವಯಸ್ಸು, ಮೊಬೈಲ್ ಸಂಖ್ಯೆ, ಜಮೀನು ಮತ್ತು ಬೆಳೆದಿರುವ ಬೆಳೆಯ ವಿವರಗಳು ಹಾಗೂ ರೈತರ ಬ್ಯಾಂಕ್ ಖಾತೆಯ ವಿವರಗಳು ಲಭ್ಯವಿರುತ್ತವೆ. ಹಾಗಾಗಿ ಪ್ರತ್ಯೇಕವಾಗಿ ಬೇರಾವುದೇ ದಾಖಲೆ ನೀಡುವ ಅವಶ್ಯಕತೆ ಇರುವುದಿಲ್ಲ.

ಫ್ರೂಟ್ಸ್ ದತ್ತಾಂಶದನ್ವಯ ರೈತರ ಬೆಳೆ ಸಮೀಕ್ಷೆ ವಿವರದಂತೆ ಬೆಳೆ ವಿಸ್ತೀರ್ಣಕ್ಕನುಗುಣವಾಗಿ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಬಹುದಾದ ಗರಿಷ್ಠ ಪ್ರಮಾಣವನ್ನು ತೋರಿಸಲಾಗುವುದು. ಖರೀದಿ ಕೇಂದ್ರಗಳಲ್ಲಿ ನೋದಣಿ ಮಾಡಿದಾಗ ಅದೇ ಖರೀದಿ ಕೇಂದ್ರದಲ್ಲೇ ಖರೀದಿ ಮಾಡಿಕೊಳ್ಳುವುದು. ರೈತರು ಖರೀದಿ ವಿವರಗಳನ್ನು ಒಪ್ಪಿ ನಮೂದಿಸಿದ ನಂತರ ಸ್ವೀಕೃತಿಯನ್ನು ಮುದ್ರಿಸಿ ರೈತರರಿಗೆ ನೀಡಲಾಗುವುದು. ರೈತರು ಭತ್ತ/ರಾಗಿ/ಜೋಳ ಸರಬರಾಜು ಮಾಡುವಾಗ ಎಫ್.ಎ.ಕ್ಯೂ ಗುಣಮಟ್ಟವನ್ನು ಪರಿಶೀಲಿಸಿ ಖರೀದಿಸಲಾಗುವುದು

**ರೈತರ ಖರೀದಿ ಮಿತಿ:**

ಜೋಳವನ್ನು ಪ್ರತಿ ರೈತರಿಂದ ಪ್ರತಿ ಎಕರೆಗೆ 20 ಕ್ವಿಂಟಾಲ್ ನಂತೆ ಗರಿಷ್ಠ 150 ಕ್ವಿಂ ಮೀರದಂತೆ ಖರೀದಿಸತಕ್ಕದ್ದು.

**ಹಣ ಪಾವತಿ:**

ಬೆಂಬಲ ಬೆಲೆ ಯೋಜನೆಯಡಿ ಜೋಳ ಸರಬರಾಜು ಮಾಡಿದ ರೈತರಿಗೆ ಅವರು ಕೃಷಿ ಇಲಾಖೆಯಲ್ಲಿ ನೋಂದಾಯಿಸಿ ಕೊಂಡಿರುವ ಬ್ಯಾಂಕ್ ಖಾತೆಗೆ ಆರ್.ಟಿ.ಜಿ.ಎಸ್ ಮೂಲಕ ಹಣ ಪಾವತಿಸಲಾಗುವುದು.

**ದಲ್ಲಾಳಿಗಳಿಗೆ/ಏಜೆಂಟರ್‌ಗಳಿಗೆ ಎಚ್ಚರಿಕೆ:**

ಮಧ್ಯವರ್ತಿಗಳು/ಏಜೆಂಟರ್‌ಗಳು ಖರೀದಿ ಕೇಂದ್ರಗಳಿಗೆ ಜೋಳವನ್ನು ತಂದಲ್ಲಿ ಅಂತಹವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು. ಬೆಂಬಲ ಬೆಲೆ ಯೋಜನೆ ಬಗ್ಗೆ ರೈತರಿಗೆ ಯಾವುದೇ ಸಮಸ್ಯೆಗಳಿದ್ದರೆ ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಕೃಷಿ ಮಾರಾಟ ಮಂಡಳಿ ಬಳ್ಳಾರಿ ಇವರು ಹಾಗೂ ತಾಲ್ಲೂಕಿನ ತಹಸಿಲ್ದಾರ್/ ಕೃಷಿ ಅಧಿಕಾರಿ/ ಎ.ಪಿ.ಎಂ.ಸಿ ಕಾರ್ಯದರ್ಶಿ/ರೈತ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸಲು ಕೋರಿದೆ.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ ನಿಯಮಿತ, ಬಳ್ಳಾರಿ ಅಥವಾ ಸೈಯದ್ ವಸೀಮ್ ಪಾಷ (ಮೊ.9449864453) ಇವರನ್ನು ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



OUR OFFERINGS:
Sales & Distribution – Genuine Toshiba photocopiers and GALTECH Smart panels
Service & Maintenance – Expert technical support and AMC services
Consumables & Accessories – Genuine spare parts
TOSHIBA GALTECH
M:9686663132
SAI MANI ENTERPRISES
Authorized Dealer of Toshiba Photocopiers & GALTECH Sirius interactive flat panel display for Vijayanagara, Bellary and Koppal Districts
# 545/A 6th Ward, Hampi Road, HOSAPETE-583201, Vijayanagara Dist.

ಮೈಕ್ರೋ ನ್ಯೂಸ್

## ಮೇ 05 ಜಿಲ್ಲಾ ಮಟ್ಟದ ದಿಶಾ ಸಮಿತಿ ಸಭೆ

**ಹಂಪಿ ಟೈಮ್ಸ್ ಬಳ್ಳಾರಿ**
ಜಿಲ್ಲಾ ಪಂಚಾಯತ್ ವತಿಯಿಂದ ಜಿಲ್ಲಾ ಅಭಿವೃದ್ಧಿ ಸಮನ್ವಯ ಉಸ್ತುವಾರಿ ಸಮಿತಿ "ದಿಶಾ" ಸಮಿತಿಯ ಸಭೆಯನ್ನು ಮೇ 05 ರಂದು ಬೆಳಿಗ್ಗೆ 10 ಗಂಟೆಗೆ ಸಂಡೂರು ತಾಲ್ಲೂಕಿನ ನಂದಿಹಳ್ಳಿ ಸ್ನಾತಕೋತ್ತರ ಕೇಂದ್ರದ ಸಭಾಂಗಣದಲ್ಲಿ ನಡೆಸಲು ನಿಗದಿಪಡಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಹಾಗೂ ದಿಶಾ ಸಮಿತಿಯ ಸದಸ್ಯ ಕಾರ್ಯದರ್ಶಿಯೂ ಆದ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ತಿಳಿಸಿದ್ದಾರೆ.
ಬಳ್ಳಾರಿ ಲೋಕಸಭಾ ಕ್ಷೇತ್ರದ ಸಂಸದರು ಹಾಗೂ ಜಿಲ್ಲಾ ಮಟ್ಟದ ದಿಶಾ ಸಮಿತಿಯ ಅಧ್ಯಕ್ಷರೂ ಆದ ಈ.ತುಕಾರಾಂ ಅವರು ಸಭೆಯ ಅಧ್ಯಕ್ಷತೆ ವಹಿಸುವರು.
ಸಭೆಗೆ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳು ಅಗತ್ಯಪೂರ್ಣ ಮಾಹಿತಿ ಯೊಂದಿಗೆ ತಪ್ಪದೇ ಹಾಜರಾಗಬೇಕು ಎಂದು ಅವರು ತಿಳಿಸಿದ್ದಾರೆ.
**ಅಹವಾಲು ಸ್ವೀಕಾರ:** ಮೇ 05 ರಂದು ಬೆಳಿಗ್ಗೆ 09.30 ಗಂಟೆಗೆ ಸಂಡೂರು ತಾಲ್ಲೂಕು ತಹಶೀಲ್ದಾರರ ಕಚೇರಿಯಲ್ಲಿ ಕೇಂದ್ರ ಮತ್ತು ಕೇಂದ್ರ ಪುರಸ್ಕೃತ ಹಾಗೂ ಇತರೆ ಯೋಜನೆಗಳ ಕುರಿತಂತೆ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು. ಅಧಿಕಾರಿಗಳು ತಪ್ಪದೇ ಹಾಜರಿರಬೇಕು ಎಂದು ಅವರು ತಿಳಿಸಿದ್ದಾರೆ.


## ಏ.25 ರಂದು ವಿಶ್ವ ಮಾಲೇರಿಯಾ ದಿನಾಚರಣೆ ಜನಜಾಗೃತಿ ಜಾಥ ಕಾರ್ಯಕ್ರಮ

**ಹಂಪಿ ಟೈಮ್ಸ್ ಬಳ್ಳಾರಿ**
ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ವಿಶ್ವ ಮಾಲೇರಿಯಾ ದಿನಾಚರಣೆ ಅಂಗವಾಗಿ 'ಮಲೇರಿಯಾ ನಮ್ಮೊಂದಿಗೆ ಕೊನೆಗೊಳ್ಳುತ್ತದೆ, ಮರು ಹೂಡಿಕೆ ಮಾಡಿ, ಮರು ಕಲ್ಪನೆ ಮಾಡಿ, ಮರು ಉತ್ತೇಜನ ನೀಡೋಣ' ಎಂಬ ಘೋಷವಾಕ್ಯದೊಂದಿಗೆ ಏ.25 ರಂದು ಬೆಳಿಗ್ಗೆ 08.30 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಲ್ಲಿ ಜನಜಾಗೃತಿ ಜಾಥ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

## ನಿತ್ಯ ಪಂಚಾಂಗ

ಮಾಸ: ಚೈತ್ರ । ಸಂವತ್ಸರ: ವಿಶ್ವಾವಸು
**25–04–2025 – ಶುಕ್ರವಾರ**

| | |
|---|---|
| ತಿಥಿ | : ದ್ವಾದಶಿ |
| ಪಕ್ಷ | : ಕೃಷ್ಣ |
| ನಕ್ಷತ್ರ | : ಪೂ.ಭಾದ್ರಪದ |
| ಯೋಗ | : ಇಂದ್ರ |
| ಕರಣ | : ತೈತುಲ |
| ಸೂರ್ಯೋದಯ | : 05:59:19 |
| ಸೂರ್ಯಾಸ್ತ | : 18:50:42 |
| ರಾಹು ಕಾಲ | : 10:49–12:25 |
| ಯಮಘಂಡ ಕಾಲ | : 15:38–17:14 |
| ಗುಳಿಕ ಕಾಲ | : 07:36–09:12 |



## ತುಂಗಭದ್ರಾ ನೀರಿನ ಮಟ್ಟ

**ಗುರುವಾರ : 24–04–2025**

| | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1584.29 ಅಡಿ |
| ಒಳ ಹರಿವು | 0 ಕ್ಯುಸೆಕ್ |
| ಹೊರ ಹರಿವು | 327 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 6.871 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |
| ಕಳೆದ ವರ್ಷ ಇದೇ ದಿನ | |
| ಇಂದಿನ ಮಟ್ಟ | 1578.47 ಅಡಿ |
| ಒಳ ಹರಿವು | 0 ಕ್ಯುಸೆಕ್ |
| ಹೊರ ಹರಿವು | 167 ಕ್ಯುಸೆಕ್ |
| ಸಾಮರ್ಥ್ಯ | 3.774 ಟಿಎಂಸಿ |

# ಗ್ರಾಮೀಣ ಜನರ ತುರ್ತು ಆರೋಗ್ಯ ಸೇವೆಗೆ ಮಿನಿ ಅಂಬುಲೆನ್ಸ್ ಸೌಲಭ್ಯ: 108ಗೆ ಕರೆ ಮಾಡಿ

### ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಹೇಳಿಕೆ



**ಹಂಪಿ ಟೈಮ್ಸ್ ಬಳ್ಳಾರಿ**
ಗ್ರಾಮೀಣ ಜನರ ಆರೋಗ್ಯ ಸೇವೆಗಳಿಗಾಗಿ ತುರ್ತು ಸಂದರ್ಭದಲ್ಲಿ ಉಪಯುಕ್ತವಾದ ಅಂಬುಲೆನ್ಸ್ ಸೇವೆಯನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಹಲಕುಂದಿ ಗ್ರಾಮ ಪಂಚಾಯತ್, ಪ್ರಾಥಮಿಕ ಆರೋಗ್ಯ ಕೇಂದ್ರ ಶಿಡಿಗಿನಮೊಳ ಇವರೊಂದಿಗೆ ವಿ.ಆರ್.ಕೆ.ಪಿ ಸ್ಪಾಂಜ್ ಅಂಡ್ ಪವರ್ ಪ್ಲಾಂಟ್ ಎಲ್.ಎಲ್.ಪಿ ಹಲಕುಂದಿ ಇವರು ಹಲಕುಂದಿ, ಹೊನ್ನಳ್ಳಿ ತಾಂಡ ಹಾಗೂ ಹೊನ್ನಳ್ಳಿ ಗ್ರಾಮಗಳಿಗೆ ಒಳಗೊಂಡಂತೆ ತುರ್ತು ಸನ್ನಿವೇಶಗಳಲ್ಲಿ ಸಹಾಯಕವಾಗುವ ಮಿನಿ ಅಂಬುಲೆನ್ಸ್ ಚಾಲನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಆರೋಗ್ಯದ ಸಮಸ್ಯೆಗಳು ವ್ಯಕ್ತಿಗೆ ಯಾವ ಸಂದರ್ಭದಲ್ಲಿ ಯಾವ ರೀತಿ ಬಂದೆರುಗುವುದನ್ನು ಊಹಿಸಲು ಯಾರಿಗೂ ಸಾಧ್ಯವಿಲ್ಲ. ಅಂತಹ ಸಂದರ್ಭದಲ್ಲಿ ಮನೆಯ ಹತ್ತಿರವೇ ಆಗಮಿಸಿ ಜಿಲ್ಲಾ ಮಟ್ಟದ ಆಸ್ಪತ್ರೆಗಳಿಗೆ ರೋಗಿಗಳನ್ನು ಕರೆದುಕೊಂಡು ಹೋಗುವ ಸೌಲಭ್ಯವನ್ನು ಅವಶ್ಯಕತೆ ಇರುವ ತುರ್ತು ಸಂದರ್ಭದಲ್ಲಿ ಪಡೆಯುವ ಮೂಲಕ ಸ್ವಾಸ್ಥ್ಯ ಸಮಾಜ ನಿರ್ಮಾಣಕ್ಕೆ ಜನತೆಯು ಕೈ ಜೋಡಿಸಬೇಕು ಎಂದು ಹೇಳಿದರು.

ಸರ್ಕಾರವು ಸಾರ್ವಜನಿಕರ ಸೇವೆಗೆ ತುರ್ತು ಸಂದರ್ಭಗಳಲ್ಲಿ ಮನೆಯಿಂದ ಹತ್ತಿರದ ಆಸ್ಪತ್ರೆಗಳಿಗೆ ತೆರಳಲು 108 ತುರ್ತು ವಾಹನದ ಸೌಲಭ್ಯ ಒದಗಿಸಿದ್ದು, ಪ್ರಸ್ತುತ ಸಮುದಾಯದ ಆರೋಗ್ಯ ಸೇವೆಯನ್ನು ಮನಗಂಡು ವಿ.ಆರ್.ಕೆ.ಪಿ ಕಂಪನಿಯ ಸಿಎಸ್‌ಆರ್ ಅನುದಾನದ ಅಡಿ ಒದಗಿಸಿರುವ ಅಂಬುಲೆನ್ಸ್ ಅನ್ನು ಗರ್ಭಿಣಿ ಮಹಿಳೆಯರು, ಅಪಘಾತ ಸಂದರ್ಭದಲ್ಲಿ, ಬೆಂಕಿ ಅವಘಡ ಮತ್ತು ಇತರೆ ಯಾವುದೇ ತುರ್ತು ಸನ್ನಿವೇಶಗಳಲ್ಲಿ ಸದುಪಯೋಗಪಡಿಸಿಕೊಳ್ಳಿ ಎಂದರು.

ವಿ.ಆರ್.ಕೆ.ಪಿ ಕಂಪನಿಯ ಮಾನವ ಸಂಪನ್ಮೂಲ ಅಧಿಕಾರಿ ಸಂದೀಪ್ ಮಾತನಾಡಿ ಸಿ.ಎಸ್.ಆರ್ ಅನುದಾನದಡಿ ರೂ.8 ಲಕ್ಷ ವೆಚ್ಚದಲ್ಲಿ ಅಂಬುಲೆನ್ಸ್ ಒದಗಿಸಲಾಗಿದ್ದು, ಇಬ್ಬರು ತರಬೇತಿ ಪಡೆದ ವಾಹನ ಚಾಲಕರು ಸರತಿಯ ಮೇಲೆ ಕಾರ್ಯನಿರ್ವಹಿಸುತ್ತಾರೆ ಎಂದರು.

ಹಲಕುಂದಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಹೊನ್ನೂರಮ್ಮ ಅಂಬುಲೆನ್ಸ್ ಚಾಲನೆ ನೀಡಿದರು.

ಉಪಾಧ್ಯಕ್ಷೆ ಸುವರ್ಣಮ್ಮ, ತಾಲ್ಲೂಕು ಆರೋಗ್ಯ ಅಧಿಕಾರಿ ಡಾ.ಆರ್.ಅಬ್ದುಲ್ಲಾ, ಗ್ರಾಮದ ಮುಖಂಡರು ಇತರರಿದ್ದರು.

## ಉಗ್ರರಿಗೆ ಕಠಿಣ ಶಿಕ್ಷೆ ಆಗಲಿ



**ಹಂಪಿ ಟೈಮ್ಸ್ ಹಗರಿಬೊಮ್ಮನಹಳ್ಳಿ**
ಕಾಶ್ಮೀರದ ಪಹಲ್ಗಾಮ್‌ನಲ್ಲಿ ಅಮಾಯಕ ಹಿಂದೂಗಳ ಮೇಲೆ ನೆಡೆಸಿದ ಉಗ್ರರ ದಾಳಿ ಖಂಡನೀಯ. ಕರ್ನಾಟಕದ ಮೂರು ಜನ ಸೇರಿ 26 ಪ್ರವಾಸಿಗರ ಮೇಲೆ ದಾಳಿ ನಡೆಸಿದ ಪರಿ ನೋಡಿದರೆ, ಹಿಂದೂಗಳ ಮೇಲೆ ಮಾಡಿದ ಷಡ್ಯಂತ್ರವಾಗಿದೆ ಎಂದು ಜನ ಜಾಗೃತಿ ಸಮಿತಿ ಅಧ್ಯಕ್ಷ ಬಾದಾಮಿ ನಟರಾಜ ಆಕ್ರೋಶ ವ್ಯಕ್ತಪಡಿಸಿದರು.
ತಹಶೀಲ್ದಾರ್ ಆರ್.ಕವಿತಾ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದರು. ಯಾರ ಮಾತಿಗೂ ಮಣಿಯದೇ ಪ್ರಧಾನಮಂತ್ರಿ ನರೇಂದ್ರಮೋದಿ ಹಾಗೂ ಕೇಂದ್ರ ಸರ್ಕಾರ ಉಗ್ರರನ್ನು ಪತ್ತೆಹಚ್ಚಿ ಕಠಿಣ ಶಿಕ್ಷೆ ನೀಡಬೇಕು. ಇನ್ನೆಂದೂ ಇಂತಹ ಘಟನೆಗಳು ಮರುಕಳಿಸದಂತೆ ಉಗ್ರರನ್ನು ಮಟ್ಟಹಾಕಬೇಕು. ನಮ್ಮ ಪ್ರವಾಸಿಗರನ್ನು ಕೊಂದ ಪಾಪಿ ಪಾಕಿಸ್ತಾನದ ಉಗ್ರರಿಗೆ ಕಠಿಣ ಶಿಕ್ಷೆ ವಿಧಿಸಬೇಕು. ದೇಶದ್ರೋಹಿಗಳನ್ನು ಮಟ್ಟ ಹಾಕುವಂತಹ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.
ಈ ಸಂದರ್ಭದಲ್ಲಿ ಹಿಂದೂ ಮಹಾ ಗಣಪತಿ ಸಮಿತಿಯ ಭರ್ಮಜ್ಜ ನಾಯಕ, ವೀರಶೈವ ಮಹಾಸಭಾ ಅಧ್ಯಕ್ಷ ಕೊಟ್ರೇಶ್ ಶೆಟ್ಟರ್, ಕಾರ್ಯದರ್ಶಿ ಅಕ್ಕಿ ಮಲ್ಲಿಕಾರ್ಜುನ, ಜೆಸಿ ದಿವಾಕರ, ವಕೀಲರಾದ ಚಂದ್ರಶೇಖರ್, ಶ್ರೀನಿವಾಸ, ವಿವಿಧ ಸಂಘಟನೆಗಳ ಕಾರ್ಯಕರ್ತರು ಇತರರು ಇದ್ದರು.

# ಈಡಿಸ್ ಇಜಿಪ್ಟ್ ಸೊಳ್ಳೆ ಸಂತತಿ ಅಧಿಕ ಡೆಂಗ್ಯು ಜ್ವರ ಸಾಧ್ಯತೆ, ನಿರ್ಲಕ್ಷ್ಯ ಬೇಡ

### ಜಿಲ್ಲಾ ರೋಗ ವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ ಹೇಳಿಕೆ

**ಹಂಪಿ ಟೈಮ್ಸ್ ಬಳ್ಳಾರಿ**
ಕೆಲವು ದಿನಗಳಿಂದ ಜಿಲ್ಲೆಯಾದ್ಯಂತ ಸುರಿದ ಅಕಾಲಿಕ ಮಳೆಯಿಂದ ತಗ್ಗು ಗುಂಡಿಗಳು ಸ್ಥರಿದಂತೆ ಅಲ್ಲಲ್ಲಿ ನೀರು ನಿಲ್ಲುವ್ಯದರಿಂದ ಡೆಂಗ್ಯು ಹರಡುವ ಈಡಿಸ್ ಇಜಿಪ್ಟ್ ಸೊಳ್ಳೆಯ ಸಂತತಿ ಹೆಚ್ಚಾಗುವ್ಯದರಿಂದ ಡೆಂಗ್ಯು ಪ್ರಕರಣಗಳು ಕಂಡು ಬರುವ ಸಾಧ್ಯತೆಗಳಿದ್ದು, ಚಿಕ್ಕ ಮಕ್ಕಳು, ಗರ್ಭಿಣಿಯರು ಹಾಗೂ ವಯೋವೃದ್ಧರು ನಿರ್ಲಕ್ಷ್ಯ ವಹಿಸದೆ ವೈದ್ಯರಿಂದ ಪರೀಕ್ಷಿಸಿಕೊಳ್ಳಿ ಎಂದು ಜಿಲ್ಲಾ ರೋಗ ವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ ಅವರು ಸಾರ್ವಜನಿಕರಲ್ಲಿ ವಿನಚಿತಿಸಿದರು.

ನೀರು ನಿಲ್ಲದಂತೆ ಮಾಡುವ ಜೊತೆಗೆ ಬಳಕೆಗಾಗಿ ನೀರು ತುಂಬುವ ಪರಿಕರಣಗಳನ್ನು ವಾರಕ್ಕೊಮ್ಮೆ ಸ್ವಚ್ಚಗೊಳಿಸಿ ಮತ್ತು ಯಾರಿಗಾದರೂ ಒಂದೇ ದಿನ ಜ್ವರ ಕಂಡು ಬಂದರೂ ಸಹ ವೈದ್ಯರ ಬಳಿ ಪರೀಕ್ಷಿಸಿ ಅಗತ್ಯ ಚಿಕಿತ್ಸೆ ಪಡೆಯಿರಿ ಎಂದು ತಿಳಿಸಿದರು.

ನಗರದ ಕೌಲ್‌ಬಜಾರ್‌ನ ಕವಾಡಿ ಗಲ್ಲಿಯಲ್ಲಿ ವೈದ್ಯಕೀಯ ತಂಡದೊಂದಿಗೆ ಗುರುವಾರ ಮನೆ ಭೇಟಿ ನಡೆಸಿ ಮಾತನಾಡಿದ ಅವರು, ಸಾಮಾನ್ಯವಾಗಿ ಜ್ವರವನ್ನು ನಾವು ನಿರ್ಲ್ಯಕ್ಷಿಸುತ್ತೇವೆ, ಇಚಿತಹ ಸಂದರ್ಭದಲ್ಲಿ ಡೆಂಗ್ಯೂ ಸಂಬಂಧಿತ ಜ್ವರವಾಗಿದ್ದರೆ ರೋಗಿಯ ಪ್ಲೇಟ್‌ಲೆಟ್ಸ್‌ಗಳ ಶೀಘ್ರ ಕುಸಿಯುವಿಕೆಯಿಚಿದ ಆರೋಗ್ಯ ಸಮಸ್ಯೆ ಎದುರಾಗಿ ರಕ್ತಸ್ರಾವದಂತಹ ಗಂಭಿರ ಸಮಸ್ಯೆ ಎದುರಿಸಬೇಕಾಗಬಹುದು. ಹಾಗಾಗಿ ಯಾರಿಗಾದರೂ 3 ದಿನಗಳ ಕಡಿಮೆಯಾಗದ ಜ್ವರ, ವಿಪರೀತ ತಲೆನೋವು, ಕಣ್ಣುಗಳ ಹಿಂಭಾಗದಲ್ಲಿ ನೋವು, ಮಾಂಸಖಂಡ ಮತ್ತು ಕೀಲುಗಳಲ್ಲಿ ವಿಪರೀತ ನೋವು ಕಾಣಿಸಿಕೊಂಡಲ್ಲಿ ನಿರ್ಲಕ್ಷಿಸಿದೇ ಹತ್ತಿರದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಅಗತ್ಯ ಪರೀಕ್ಷೆ ಮಾಡಿಸಿ ವೈದ್ಯರ ಸಲಹೆಯಂತೆ ಲಕ್ಷಣಗಳ ಆಧಾರದ ಮೇರೆಗೆ ಚಿಕಿತ್ಸೆ ಪಡೆಯಲು ಕೋರಿದರು.

ಆಶ್ರಯ ಕಾಲೋನಿ ವೈದ್ಯಾಧಿಕಾರಿ ಡಾ. ಕಾಶೀಪ್ರಸಾದ್ ಅವರು ಮಾತನಾಡಿ, ಈಗಾಗಲೇ ಮನೆಗಳಿಗೆ ಭೇಟಿ ನೀಡುವಾಗ ಬಾಟಲ್‌ನಲ್ಲಿ ಲಾರ್ವಾ (ಸೊಳ್ಳೆಯ ಮರಿ) ಸಂಗ್ರಹಿಸಿಕೊಂಡು ಜನತೆಗೆ ಪ್ರಾತ್ಯಕ್ಷಿಕೆಯನ್ನು ನೀಡಿ, ಡ್ರಮ್, ಬ್ಯಾರಲ್, ನೀರಿನ ತೊಟ್ಟಿ, ಕಲ್ಲಿನ ಡೋಣಿ, ಹೂವಿನ ಕುಂಡಲ ಮುಂತಾದ ಪರಿಕರಗಳನ್ನು ವಾರಕ್ಕೊಮ್ಮೆ ಸ್ವಚ್ಚಗೊಳಿಸಲು ಹಾಗೂ ಮುಚ್ಚಳ ಮುಚ್ಚಿ ಬಟ್ಟೆ ಕಟ್ಟಲು ವಿನಚಿತಿಸಿ, ಬಳಕೆ ಮಾಡದ ನೀರು ಸಂಗ್ರಹಕಗಳಿಗೆ ಕೊಬ್ಬರಿ ಎಣ್ಣೆಯನ್ನು ಹಾಕುವ ಮೂಲಕ ಸೊಳ್ಳೆ ಉತ್ಪತ್ತಿ ತಡೆಯಲು ವಿನಚಿತಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಜಿಲ್ಲಾ ಎನ್‌ವಿಬಿಡಿಸಿಪಿ ಸಲಹೆಗಾರ ಪ್ರತಾಪ್, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ದಾನಕುಮಾರಿ, ಆರೋಗ್ಯ ನಿರೀಕ್ಷಣಾಧಿಕಾರಿ ಮಹಾಲಿಂಗ, ಪ್ರಶಾಂತ್, ಆಶಾ ಕಾರ್ಯಕರ್ತೆ ಸಾವಿತ್ರಿ ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು.

## ಉಗ್ರರ ದಾಳಿಯಲ್ಲಿ ಮೃತರ ಆತ್ಮಕ್ಕೆ ಶಾಂತಿ ಕೋರಿ ಪ್ರಾರ್ಥನೆ



**ಹಂಪಿ ಟೈಮ್ಸ್ ಹೊಸಪೇಟೆ:**
ನಗರದ ಡಾ. ಪುನೀತ್ ರಾಜಕುಮಾರ್ ಸರ್ಕಲ್‌ನಲ್ಲಿ ಗುರುವಾರ ರಾತ್ರಿ ಜಮ್ಮುಕಾಶ್ಮೀರದ ಪಹಲ್ಗಾಮ್‌ದಲ್ಲಿ ಭಯೋತ್ಪಾದಕರ ದಾಳಿಯಲ್ಲಿ ಮೃತಪಟ್ಟವರ ಆತ್ಮಕ್ಕೆ ಶಾಂತಿ ಕೋರಿ ಮೇಣದ ಬತ್ತಿ ಹಚ್ಚಿ ಪ್ರಾರ್ಥಿಸಲಾಯಿತು.
ಈ ಸಂದರ್ಭದಲ್ಲಿ ರಾಜ್ಯ ಒಬಿಸಿ ಮೋರ್ಚಾ ಉಪಾಧ್ಯಕ್ಷ ಅಯ್ಯಳ್ಳಿ ತಿಮ್ಮಪ್ಪ. ರಾಜ್ಯ ಎಸ್ ಟಿ ಮೋರ್ಚಾ ಸದಸ್ಯ ಕಾಸಟ್ಟಿ ಉಮಾಪತಿ. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ ಎಸ್ ರಾಘವೇಂದ್ರ. ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷರು ಕಿಚಿಡಿ ಕೊಟ್ರೇಶ್. ಮಂಡಲ ಅಧ್ಯಕ್ಷರು ಶಂಕರ್ ಮೇಟಿ. ಮಂಡಲ ಪ್ರಧಾನ ಕಾರ್ಯದರ್ಶಿ ಚಂದ್ರು ದೇವಲಾಪುರ ಹೊನ್ನೂರಪ್ಪ. ಮದುರ ಚೆನ್ನಶಾಸ್ತ್ರಿ. ರಾಘವೇಂದ್ರ. ಗೌಳಿ ಬಸುವರಾಜ್. ದೇವರಮನಿ ಶ್ರೀನಿವಾಸ. ಉಮಾದೇವಿ. ಪೂರ್ಣಿಮಾ. ತಿರುಮಲೇಶ್. ಕರಿಯಪ್ಪ ಹೊಸಪೇಟೆ, ಬಿಜೆಪಿ ಮಂಡಲ, ವಿವಿಧ ಮೋರ್ಚಾ ನಗರಮಹಾಶಕ್ತಿಕೇಂದ್ರ, ಮಹಾಶಕ್ತಿಕೇಂದ್ರ, ಶಕ್ತಿಕೇಂದ್ರ, ಮಹಿಳಾ ಕಾರ್ಯಕರ್ತರು, ಬೂತ್ ಮಟ್ಟದ ಪದಾಧಿಕಾರಿಗಳು, ಕಾರ್ಯಕರ್ತರು ಇದ್ದರು.

# ಏ.27 ವಸತಿ ಶಾಲೆಗಳ 6ನೇ ತರಗತಿ ಪ್ರವೇಶಾತಿ ಪರೀಕ್ಷೆ : ನಿಷೇಧಾಜ್ಞೆ ಜಾರಿ

**ಹಂಪಿ ಟೈಮ್ಸ್ ಹೊಸಪೇಟೆ**
ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ನಿರ್ದೇಶನಾಲಯದಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಡಾ.ಅಬ್ದುಲ್ ಕಲಾಂ ಹಾಗೂ ಮುಸ್ಲಿಂ ವಸತಿ ಶಾಲೆಗಳ 6ನೇ ತರಗತಿ ಪ್ರವೇಶಾತಿ ಪರೀಕ್ಷೆಗಳು ಏ.27 ರಂದು ಜರುಗಲಿವೆ ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ತಿಳಿಸಿದ್ದಾರೆ.

ಹೊಸಪೇಟೆ, ಹರಪನಹಳ್ಳಿ ಮತ್ತು ಕೂಡ್ಲಿಗಿ ತಾಲೂಕುಗಳಲ್ಲಿ ಪರೀಕ್ಷಾ ಕೇಂದ್ರಗಳಿದ್ದು, ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಪರೀಕ್ಷಾ ನಿಯಮಗಳನುಸಾರ ಪಾರದರ್ಶಕತೆಯಿಂದ ನಿರ್ವಹಿಸಲು ಈಗಾಗಲೇ ಪರೀಕ್ಷಾ ಕೇಂದ್ರಗಳಿಗೆ ಪರೀವೀಕ್ಷಕರನ್ನು, ಮುಖ್ಯಸ್ಥರನ್ನು, ಮಾರ್ಗಧಿಕಾರಿಗಳನ್ನು ನಿಯೋಜಿಸಲಾಗಿದೆ. ಪರೀಕ್ಷಾ ಪ್ರಕ್ರಿಯೆಯಲ್ಲಿನ ಪಾರದರ್ಶಕತೆ ಹಾಗೂ ಗೌಪ್ಯತೆಯಲ್ಲಿ ಯಾವುದೇ ರಾಜಿಯಿಲ್ಲದಂತೆ ನ್ಯಾಯಸಮ್ಮತವಾಗಿ, ನಿಷ್ಪಕ್ಷಪಾತವಾಗಿ ನಡೆಸಬೇಕು. ಒಂದು ವೇಳೆ ಪರೀಕ್ಷಾ ಕರ್ತವ್ಯದಲ್ಲಿ ಲೋಪವೆಸಗಿದರೇ ಶಿಸ್ತು ಕ್ರಮಜರುಗಿಸಲಾಗುವುದು. ಪರೀಕ್ಷಾ ಕೇಂದ್ರದ ಸುತ್ತಮುತ್ತಲಿನ 200 ಮೀಟರ್ ಆವರಣವನ್ನು ನಿರ್ಬಂಧಿತ ಪ್ರದೇಶವೆಂದು ಘೋಷಿಸಿ ನಿಷೇಧಾಜ್ಞೆ ಜಾರಿ ಮಾಡಿ ಆದೇಶಿಸಲಾಗಿದೆ. ಆದ್ದರಿಂದ ಪರೀಕ್ಷಾ ಕೇಂದ್ರದ ಬಳಿಯಿರುವ ಜೆರಾಕ್ಸ್, ಕಂಪ್ಯೂಟರ್ ಮತ್ತು ಸೈಬರ್ ಅಂಗಡಿಗಳನ್ನು ಮುಚ್ಚುವಂತೆ ತಿಳಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಪ್ರದೇಶದಲ್ಲಿ ಪರೀಕ್ಷಾರ್ಥಿಗಳಲ್ಲದ, ಪರೀಕ್ಷಾ ಉಸ್ತುವಾರಿ ಇಲ್ಲದ ಅಧಿಕಾರಿಗಳು, ಸಿಬ್ಬಂದಿ, ಸಾರ್ವಜನಿಕರು ಅಥವಾ ಯಾವುದೇ ಅನಧಿಕೃತ ವ್ಯಕ್ತಿ ಮತ್ತು ವ್ಯಕ್ತಿಗಳ ಗುಂಪುಗಳಿಗೆ ಕಡ್ಡಾಯವಾಗಿ ಪ್ರವೇಶ ನಿಷೇಧಿಸಿದೆ, ಈ ಆದೇಶವನ್ನು ಉಲ್ಲಂಘಿಸಿ ಪ್ರವೇಶಿಸಿದರೆ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು ಎಂದು ಜಿಲ್ಲಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಾವು ಕಡಿದಾಗ ವ್ಯಕ್ತಿಯನ್ನು ಗಾಬರಿಗೊಳಿಸಬೇಡಿ

**ಮೊದಲ ಪುಟದಿಂದ**
ನಾಲಿಗೆ ತೊದಲುವಿಕೆ, ನುಂಗಲು ಕಷ್ಟವಾಗುವುದು, ಉಸಿರಾಟ ತೊಂದರೆ ಮುಂತಾದವುಗಳನ್ನು ಗಮನಿಸಬೇಕು. ಹಾಗೆಯೇ ಗಾಯದ ಜಾಗದಲ್ಲಿ ತೀವ್ರ ಉರಿ, ನೋವು ಹರಡುವಿಕೆ ಅಥವಾ ಊದುವಿಕೆ ಗಾಯದ ಸುತ್ತ ಬಣ್ಣಹೀನವಾಗುವುದು, ಕೆಳಬೆನ್ನಿನಲ್ಲಿ ನೋವು ಮುಂತಾದ ಲಕ್ಷಣಗಳು ಅಂಗಾಂಗಕ್ಕೆ ಹಾನಿ ಮಾಡುವ ವಿಷದ ಅಂಶವಾಗಿರುತ್ತದೆ.

ಈ ಲಕ್ಷಣಗಳನ್ನು ರೋಗಿಯಲ್ಲಿ ಕಂಡುಬಂದರೆ ಜೊತೆಗಿರುವ ವ್ಯಕ್ತಿಯು ವೈದ್ಯರಿಗೆ ತಿಳಿಸುವ ಮೂಲಕ ವ್ಯಕ್ತಿಯ ಜೀವ ಕಾಪಾಡಲು ಸಾಧ್ಯವಾಗುವ ಚಿಕಿತ್ಸೆ ಒದಗಿಸಲು ಸಹಾಯಕವಾಗುತ್ತದೆ ಎಂದರು.

ನಮ್ಮ ಕ್ಲಿನಿಕ್ ನ ಡಾ.ಅಬ್ದುಲ್ಲಾ ಖಲೀಲ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಜಿಲ್ಲಾ ಎನ್‌ಸಿಡಿ ಸಲಹೆಗಾರ ಡಾ.ಜಬೀನ್ ತಾಜ್, ಜಿಲ್ಲಾ ಸಾಂಕ್ರಾಮಿಕ ರೋಗ ತಜ್ಞರಾದ ಡಾ.ವಿಶಾಲಾಕ್ಷಿ, ಆಶಾ ಕಾರ್ಯಕರ್ತೆ ಸಲ್ಮಾ ಸೇರಿದಂತೆ ಅಂಗನವಾಡಿ ಕಾರ್ಯಕರ್ತರು, ಗ್ರಾಮಸ್ಥರು ಇತರರು ಉಪಸ್ಥಿತರಿದ್ದರು.

ಹಂಪಿ ಟೈಮ್ಸ್
ವಿಜಯನಗರದ ಹೆಮ್ಮೆ ಕನ್ನಡ ದಿನ ಪತ್ರಿಕೆ
E-PAPER USER ENGAGEMENT
1,70,000+
Scan to read epaper

HAMPI TIMES Print & Digital Edition
Searching for the perfect platform to promote your brand?
Want to reach more people? Choose HAMPI TIMES
Contact : 94486 33038
E-mail: hampitimes@gmail.com
www.hampitimes.com